ಸಂಪುಟ: 11 ಸಂಚಿಕೆ: 213 ಪುಟಗಳು: 4+2 ಬೆಲೆ: ₹ 3.00 ಮಂಗಳವಾರ, ಸೆಪ್ಟೆಂಬರ್ 29, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 213 Pages : 4+2 Rate : 3.00 Tuesday, September 29, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಬೆಟಗೇರಿಯಲ್ಲಿ ನಾಳೆ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವ ಹಿನ್ನಲೆಯಲ್ಲಿ ಸೆ. 30ರಂದು ಬೆಳಗ್ಗೆ 10ರಿಂದ ಸಂಜೆ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.ನಿಗದಿತ ಅವಧಿಯಲ್ಲಿ 110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ ಎಲ್ಲಾ ನಗರ ಹಾಗೂ ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.ಇದರೊಂದಿಗೆ ಎನ್‌ಜೆವೈ, ಸೋಲಾರ್, ಕೆಐ-ಎಡಿಬಿ ಕೈಗಾರಿಕಾ ಹಾಗೂ ಇಐಪಿ ಫೀಡರ್‌ಗಳ ವ್ಯಾಪ್ತಿಯ ಗ್ರಾಹಕ-ರಿಗೂ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿರುವುದರಿಂದ ಸಾರ್ವಜನಿಕರು ಈ ಕುರಿತು ಗಮನಹರಿಸಿ ಹೆಸ್ಕಾಂನೊ ಂದಿಗೆ ಸಹಕರಿಸುವಂತೆ ಕಾರ್ಯನಿರ್ವಾಹಕ ಎಂಜಿನಿಯರ್, ಕಾರ್ಯ ಮತ್ತು ಪಾಲನೆ ವಿಭಾಗ, ಹೆಸ್ಕಾಂ ಗದಗ ಅವರು ಮನವಿ ಮಾಡಿದ್ದಾರೆ.

## ನಾಳೆ ಲಕ್ಷ್ಮೇಶ್ವರದಲ್ಲಿ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಲಕ್ಷ್ಮೇಶ್ವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಸೆ. 30ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ. 110 ಕೆವ್ಹಿ ಲಕ್ಷ್ಮೇಶ್ವರ ಉಪಕೇಂದ್ರಗಳಿಂದ ವಿದ್ಯುತ್ ಪೂರೈಕೆಯಾಗುವ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಎಲ್ಲ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಇದ ರೊಂದಿಗೆ 33 ಕೆವ್ಹಿ ಎಂ.ಎಂ.ಸಿ.ಎಲ್ ಗಾಳಿಯಂತ್ರ ಘಟಕ ಹಾಗೂ 33 ಕೆವ್ಹಿ ಸೋಮೇಶ್ವರ ಸ್ಪಿನ್ನಿಂಗ್ ಮಿಲ್ ಸೋಲಾರ್ ಮತ್ತು ಎನ್‌ಜೆವೈಗಳಿಂದ ಪೂರೈಕೆ ಯಾಗುವ ಪ್ರದೇಶಗಳಲ್ಲೂ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾ ಗಲಿದೆ. ನಿಗದಿತ ಅವಧಿಯಲ್ಲಿ ವಿದ್ಯುತ್ ವಿತರಣಾ ಕೇಂದ್ರ ಹಾಗೂ 11 ಕೆವ್ಹಿ ಫೀಡರ್‌ಗಳ ಮಾರ್ಗ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುವುದರಿಂದ ಸಾರ್ವಜನಿಕರು ಈ ಕುರಿತು ಗಮನಹರಿಸಿ ಹೆಸ್ಕಾಂನೊಂದಿಗೆ ಸಹಕರಿಸುವಂತೆ ಕಾರ್ಯನಿರ್ವಾಹಕ ಎಂಜಿನಿಯರ್, ಕಾರ್ಯ ಮತ್ತು ಪಾಲನೆ ವಿಭಾಗ, ಹೆಸ್ಕಾಂ ಗದಗ ಅವರು ಮನವಿ ಮಾಡಿದ್ದಾರೆ.

## ಶಿರಹಟ್ಟಿಯಲ್ಲಿ ಸೆ.30ರಂದು ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವ ಹಿನ್ನಲೆಯಲ್ಲಿ ಸೆ. 30ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ. ಅಲ್ಲದೆ, ಎಲಿಶಿರೂರಿನ ಮೆ. ಬಿಪಿಸಿಎಲ್-1 ಮತ್ತು 2 ಗಾಳಿಯಂತ್ರ ಘಟಕಗಳಿಗೂ ನಿಗದಿತ ಅವಧಿಯಲ್ಲಿ ವಿದ್ಯುತ್ ಪೂರೈಕೆ ವ್ಯತ್ಯಯವಾಗಲಿದೆ. ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿರುವುದರಿಂದ ಸಾರ್ವಜನಿಕರು ಪ್ರಕಟಣೆಯನ್ನು ಗಮನಿಸಿ ಹೆಸ್ಕಾಂನೊಂದಿಗೆ ಸಹಕ-ರಿಸುವಂತೆ ಕಾರ್ಯನಿರ್ವಾಹಕ ಎಂಜಿನಿಯರ್, ಕಾರ್ಯ ಮತ್ತು ಪಾಲನೆ ವಿಭಾಗ, ಹೆಸ್ಕಾಂ ಗದಗ ಅವರು ಮನವಿ ಮಾಡಿದ್ದಾರೆ.

### ಕೆಆರ್‌ಐಡಿಎಲ್ ಎಇಇ ನಾಪತ್ತೆ ಪ್ರಕರಣಕ್ಕೆ ಅಲ್ಪಸಂಖ್ಯಾತರ ಆಕ್ರೋಶ

# ಪರ್ವೇಜ್ ಪತ್ತೆಗೆ 3 ದಿನಗಳ ಗಡುವು

**ವಿಜಯಸಾಕ್ಷಿ ಸುದ್ದಿ, ಗದಗ**



ಕೆಆರ್‌ಐಡಿಎಲ್ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪರ್ವೇಜ್ ಧಾರವಾಡ ನಾಪತ್ತೆಯಾಗಿ 16 ದಿನಗಳು ಕಳೆದರೂ ಪತ್ತೆಯಾಗದಿರುವುದಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಗದಗ ಜಿಲ್ಲಾ ಅಲ್ಪಸಂಖ್ಯಾತರ ಒಕ್ಕೂಟ, ಪರ್ವೇಜ್ ಅವರನ್ನು ಶೀಘ್ರ ಪತ್ತೆಹಚ್ಚಿ ಸುರಕ್ಷಿತವಾಗಿ ಕರೆತರಬೇಕು ಎಂದು ಆಗ್ರಹಿಸಿದೆ.

ಪರ್ವೇಜ್ ಧಾರವಾಡ ನಾಪತ್ತೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಶೋಧ ಕಾರ್ಯವನ್ನು ತೀವ್ರಗೊಳಿಸಬೇಕು ಎಂದು ಆಗ್ರಹಿಸಿ ಸೋಮವಾರ ನಗರದಲ್ಲಿ ಅಲ್ಪಸಂಖ್ಯಾತರ ಒಕ್ಕೂಟದ ವತಿಯಿಂದ ಬೃಹತ್ ಪ್ರತಿಭಟನೆ ನಡೆಯಿತು. ನಗರದ ವಿವಿಧೆಡೆಯಿಂದ ಆಗಮಿಸಿದ ಒಕ್ಕೂಟದ ಪದಾಧಿಕಾರಿಗಳು ಹಾಗೂ ಸದಸ್ಯರು ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿ



ಕಚೇರಿಗೆ ತೆರಳಿದರು. ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು.

ಪರ್ವೇಜ್ ಅವರು ಬರೆದಿದ್ದಾರೆ ಎನ್ನಲಾದ ಪತ್ರದಲ್ಲಿ ಗುತ್ತಿಗೆದಾರರ ಒತ್ತಡ, ಬಿಲ್ ಬಾಕಿ ಹಾಗೂ ಹಣಕಾಸಿನ ವಿಚಾರಗಳ ಕುರಿತು ಉಲ್ಲೇಖವಾಗಿರುವ ಹಿನ್ನೆಲೆಯಲ್ಲಿ, ಪ್ರಕರಣದ ಎಲ್ಲ ಆಯಾಮಗಳಲ್ಲೂ ತನಿಖೆ ನಡೆಸಬೇಕು. ಅವ-ರಿಗೆ ಕಿರುಕುಳ ನೀಡಿದವರು ಯಾರು ಎಂಬುದನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪರ್ವೇಜ್ ಅವರ ಕುಟುಂಬ ಆತಂಕದಲ್ಲಿರುವ ಹಿನ್ನೆಲೆಯಲ್ಲಿ ಕುಟುಂಬದ ಸದಸ್ಯರಿಗೆ ಸೂಕ್ತ ಪೊಲೀಸ್ ಭದ್ರತೆ ಒದಗಿಸಬೇಕು. ನಾಪತ್ತೆ ಪ್ರಕರಣದ ತನಿಖೆಯಲ್ಲಿ ಯಾವುದೇ ಲೋಪವಾಗದಂತೆ ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ವಿಶೇಷ ತನಿಖಾ ತಂಡ ರಚಿಸಿ ಶೋಧ ಕಾರ್ಯವನ್ನು ಮತ್ತಷ್ಟು ಚುರುಕುಗೊಳಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

**ಸರ್ಕಾರದ ನಡೆಗೆ ಅಲ್ಪಸಂಖ್ಯಾತರ ಆಕ್ರೋಶ**

ಗದಗ ಜಿಲ್ಲಾ ಅಲ್ಪಸಂಖ್ಯಾತರ ಅಧ್ಯಕ್ಷ ಬಾಷಾಸಾಬ ಮಲ್ಲಸಮುದ್ರ ಮಾತನಾಡಿ, ಪರ್ವೇಜ್ ನಾಪತ್ತೆ ಪ್ರಕರಣದಲ್ಲಿ ಸರ್ಕಾರ ಮತ್ತು ಪೊಲೀಸ್ ಇಲಾಖೆ ತ್ವರಿತವಾಗಿ ಕಾರ್ಯಪ್ರವೃತ್ತರಾಗಬೇಕು. ಕುಟುಂಬದ ಆತಂಕವನ್ನು ಗಂಭೀರವಾಗಿ ಪರಿಗಣಿಸಿ ಅವರಿಗೆ ಧೈರ್ಯ ತುಂಬುವ ರೀತಿಯಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪರ್ವೇಜ್ ಅವರನ್ನು ಮೂರು ದಿನಗಳೊಳಗೆ ಪತ್ತೆಹಚ್ಚದಿದ್ದರೆ ಜಿಲ್ಲಾ ಮಟ್ಟದಲ್ಲಿ ಸಭೆ ಕರೆದು ಮುಂದಿನ ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ಅವರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಮುದಾಯದ ಧರ್ಮಗುರು ಶಬ್ಬೀರ ಮುಫ್ತಿಸಾಬ ಬೋದ್ಲೇಖಾನ, ಅಬ್ದುಲಗಫೂರಸಾಬ ಪಲ್ಲೇದ, ಯೂಸೂಫ್ ಕೊಟ್ಟೂರ, ಆರೀಫ್ ಹುನಗುಂದ, ಕರಿಮಸಾಬ ಸುಣಗಾರ, ಯೂಸೂಫ್ ಡಂಬಳ, ಉಸ್ಮಾನ ಮಾಳೆಕೊಪ್ಪ, ಖಾಲಿದ್ ಕೊಪ್ಪಳ, ಮುನ್ನಾ ಶೇಕ್, ರಾಜೇಸಾಬ ಕಲ್ಮನಿ, ಮುನ್ನಾ ಬಳ್ಳಾರಿ, ರಫೀಕ್ ಜಮಾಲಖಾನ, ಇರ್ಫಾನ್ ಡಂಬಳ, ದಾದು ಮುಂಡರಗಿ, ರಿಯಾಜ್ ಗುಡಿಸಲಮನಿ, ಯಾಸೀನ್ ಖಾಜಿ, ಅಕ್ಬರ್ ಅತ್ತಾರ, ಯೂನೂಸ್ ಕೌತಾಳ, ಎಂ.ಡಿ. ನದಾಫ್, ಎಂ.ಎ. ಅಣ್ಣಿಗೇರಿ, ಸಾಧಿಕ್ ಗುಳಗುಂದಿ, ನಿಜಾಮ್ ಹುಬ್ಬಳ್ಳಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

> ಒಬ್ಬ ಅಧಿಕಾರಿಯ ಕುಟುಂಬ ಇಂತಹ ಸಂಕಷ್ಟದ ಪರಿಸ್ಥಿತಿಯಲ್ಲಿ ಇರುವಾಗ ಅವರ ಆತಂಕವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಪರ್ವೇಜ್ ಅವರ ಕುಟುಂಬಕ್ಕೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರ ಸ್ಪಷ್ಟವಾದ ಕ್ರಮ ಕೈಗೊಳ್ಳಬೇಕು. ಪ್ರಕರಣದ ಸತ್ಯಾಂಶವನ್ನು ಶೀಘ್ರ ಹೊರತರಲು ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ನಡೆಸಬೇಕು.
>
> – ಬಾಷಾಸಾಬ ಮಲ್ಲಸಮುದ್ರ

# ಸ್ಪೀಕರ್ ಜಿ.ಎಸ್. ಪಾಟೀಲರಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಮೀಪದ ಬೇಲೂರು ಕೈಗಾ-ರಿಕಾ ಪ್ರದೇಶದಲ್ಲಿರುವ ಆರ್.ಜಿ.ಇ. ಸೊಸೈಟಿಯ ಅಥರ್ವ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ಕರ್ನಾಟಕ ವಿಧಾನಸಭೆಯ ಸ್ಪೀಕರ್ ಹಾಗೂ ಆರ್.ಜಿ.ಇ. ಸೊಸೈಟಿ ಅಧ್ಯಕ್ಷ ಜಿ.ಎಸ್. ಪಾಟೀಲ ಅವರನ್ನು ಶನಿವಾರ ಸನ್ಮಾನಿಸಲಾಯಿತು.

ಕರ್ನಾಟಕ ವಿಧಾನಸಭೆಯ ಸ್ಪೀಕರ್ ಆಗಿ ಆಯ್ಕೆಯಾದ ಬಳಿಕ ಪ್ರಥಮ ಬಾರಿಗೆ ಸಂಸ್ಥೆಗೆ ಆಗಮಿಸಿದ ಜಿ.ಎಸ್. ಪಾಟೀಲ ಅವರನ್ನು ಮಹಾವಿದ್ಯಾಲಯದ ಸದಸ್ಯರು, ಹಿತೈಷಿಗಳು ಹಾಗೂ ಸಿಬ್ಬಂದಿ ಗೌರವಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಂಶುಪಾಲ ಡಾ. ರಜನೀಶ ಮೇಟಿ, ಜಿ.ಎಸ್. ಪಾಟೀಲ ಅವರು ರೋಣ, ಗದಗ ಹಾಗೂ ಧಾರವಾಡದಲ್ಲಿ ಆಧುನಿಕ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಸಾವಿರಾರು



ವಿದ್ಯಾರ್ಥಿಗಳಿಗೆ ಶಿಕ್ಷಣದ ಅವಕಾಶ ಕಲ್ಪಿಸಿದ್ದಾರೆ. ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಲ್ಲೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿ.ಎಸ್. ಪಾಟೀಲ, ತಮ್ಮ ರಾಜಕೀಯ ಹಾಗೂ ವೈಯಕ್ತಿಕ ಬದುಕಿನಲ್ಲಿ ಮಾರ್ಗದರ್ಶನ, ಬೆಂಬಲ ಮತ್ತು ಸಹಕಾರ ನೀಡಿದವರನ್ನು ಸ್ಮರಿಸಿದರು.

ಆರ್.ಜಿ.ಇ. ಸೊಸೈಟಿ ಚೇರ್ಮನ್ ಐ.ಎಸ್. ಪಾಟೀಲ, ಅಥರ್ವ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಅಭಯ್ ಪಾಟೀಲ್, ನಿರ್ದೇಶಕ ಅಕ್ಷಯ ಪಾಟೀಲ, ಆಡಳಿತಾಧಿಕಾರಿ ಈಶ್ವರ ಸಂಗೊಳ್ಳಿ ವೇದಿಕೆಯಲ್ಲಿದ್ದರು.

ಉಪಪ್ರಾಂಶುಪಾಲ ಡಾ. ರಮೇಶ ಟಿ.ಕೆ. ಸೇರಿದಂತೆ ಬೋಧಕ- ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

### ನಾಪತ್ತೆ ಪ್ರಕರಣದ ಕುರಿತು ವಿಚಾರಣೆ

# ಪರ್ವೇಜ್ ತಂದೆಗೆ ಕುಮಾರಸ್ವಾಮಿ, ಎಚ್.ಕೆ. ಪಾಟೀಲ ಧೈರ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ನಾಪತ್ತೆಯಾಗಿರುವ ಕೆಆರ್‌ಐ-ಡಿಎಲ್ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪರ್ವೇಜ್ ಧಾರವಾಡ ಅವರ ತಂದೆ ಜಾಫರ್ ಅವರನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಗದಗ ಶಾಸಕ ಎಚ್.ಕೆ. ಪಾಟೀಲ ದೂರವಾಣಿ ಮೂಲಕ ಸಂಪರ್ಕಿಸಿ ಧೈರ್ಯ ತುಂಬಿದ್ದಾರೆ.

ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಮೂಲಕ ಜಾಫರ್ ಅವರನ್ನು ಸಂಪರ್ಕಿಸಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಪರ್ವೇಜ್ ನಾಪತ್ತೆ ಪ್ರಕರಣದ ಕು-ರಿತು ಮಾಹಿತಿ ಪಡೆದುಕೊಂಡರು. ಕಾಮಗಾರಿ ಬಾಕಿ ಬಿಲ್‌ಗಳ ವಿಚಾರದಲ್ಲಿ ಪರ್ವೇಜ್ ವಿರುದ್ಧ ಯಾವುದಾದರೂ ದೂರು ಇತ್ತೇ ಎಂಬುದರ ಕುರಿತು ವಿಚಾ-ರಿಸಿದರು. ಮುಖ್ಯಮಂತ್ರಿ ದೂರು ಇತ್ತು ಎಂದು ಹೇಳಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಮಾಹಿತಿ ಇದೆಯೇ ಎಂದು ಪ್ರಶ್ನಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಾಫರ್, ತಮ್ಮ ಮಗ ಪರ್ವೇಜ್ ವಿರುದ್ಧ ಯಾವುದೇ ದೂರು ಇರಲಿಲ್ಲ ಎಂದು ತಿಳಿಸಿದ್ದಾರೆ.



**ಕೆಲಸದ ವಿಚಾರವನ್ನೂ ಮನೆಯಲ್ಲಿ ಹೇಳುತ್ತಿರಲಿಲ್ಲ**

ಮತ್ತೊಂದೆಡೆ ಗದಗ ಶಾಸಕ ಎಚ್.ಕೆ. ಪಾಟೀಲ ಕೂಡ ದೂರವಾಣಿ ಮೂಲಕ ಜಾಫರ್ ಅವರನ್ನು ಸಂಪರ್ಕಿಸಿ ಧೈರ್ಯ ತುಂಬಿದರು. ಕಾಂಗ್ರೆಸ್ ಯುವ ಮುಖಂಡ ಸಯ್ಯದ ಖಾಲಿದ್ ಕೊಪ್ಪಳ ಅವರ ಮೂಲಕ ಜಾಫರ್ ಅವರೊಂದಿಗೆ ಮಾತನಾಡಿದ ಪಾಟೀಲ, ಪರ್ವೇಜ್ ಚುರುಕಿನ ಅಧಿಕಾರಿಯಾಗಿದ್ದು, ಮಿತಭಾಷಿಯಾಗಿದ್ದರು. ಈ ರೀತಿಯಾಗಿ ನಾಪತ್ತೆಯಾಗಿರುವುದು ಆಶ್ಚರ್ಯ ಮೂಡಿಸಿದೆ ಎಂದು ಹೇಳಿದರು.

ನಾಪತ್ತೆಯಾಗುವ ಮುನ್ನ ಪರ್ವೇಜ್ ಮನೆಯಲ್ಲಿ ಯಾವುದಾದರೂ ವಿಷಯ ತಿಳಿಸಿದ್ದರೇ ಎಂಬುದನ್ನು ಪಾಟೀಲ ವಿಚಾ-ರಿಸಿದರು. ಇದಕ್ಕೆ ಜಾಫರ್, ಪರ್ವೇಜ್ ಮನೆಯಲ್ಲಿ ಯಾವುದೇ ವಿಷಯ ಹೇಳಿರಲಿಲ್ಲ. ಸಾಮಾನ್ಯವಾಗಿ ತಮ್ಮ ಕೆಲಸದ ವಿಚಾರಗಳನ್ನೂ ಮನೆಯಲ್ಲಿ ಹೇಳುತ್ತಿರಲಿಲ್ಲ ಎಂದು ತಿಳಿಸಿದರು.

**ನನ್ನ ಮಗನನ್ನು ಆದಷ್ಟು ಬೇಗ ಹುಡುಕಿಕೊಡಿ**

ಪರ್ವೇಜ್ ಅವರನ್ನು ಆದಷ್ಟು ಬೇಗ ಹುಡುಕಿಕೊಡುವಂತೆ ಜಾಫರ್ ಅವರು ಶಾಸಕ ಎಚ್.ಕೆ. ಪಾಟೀಲ ಅವ-ರಿಗೆ ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಶಾಸಕರು, ಈ ಕುರಿತು ಪೊಲೀಸರೊಂದಿಗೆ ಮಾತನಾಡುವುದಾಗಿ ಭರವಸೆ ನೀಡಿ ಜಾಫರ್ ಅವರಿಗೆ ಧೈರ್ಯ ತುಂಬಿದರು

### ಸೇವಾ ಭದ್ರತೆ, ಶೈಕ್ಷಣಿಕ ಸಂಯೋಜಕರ ನೇಮಕಕ್ಕೆ ಆಗ್ರಹ

# ಅತಿಥಿ ಉಪನ್ಯಾಸಕರ ತಾಳ್ಮೆ ಪರೀಕ್ಷಿಸಬೇಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಉದ್ಯೋಗ ಹಾಗೂ ಸೇವಾ ಭದ್ರತೆ ಕಲ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕು. ಇಲ್ಲವಾದಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಕರ್ನಾಟಕ ರಾಜ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಕಲ್ಮನಿ ಎಚ್ಚರಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ತನ್ನ ಪ್ರಣಾಳಿಕೆಯಲ್ಲಿ ಅತಿಥಿ ಉಪನ್ಯಾಸಕರನ್ನು ಕಾಯಂಗೊಳಿಸುವ ಭರವಸೆ ನೀಡಿದ್ದರೂ ಈ ಕುರಿತು ಯಾವುದೇ ಸ್ಪಷ್ಟ ಕ್ರಮ ಕೈಗೊಂಡಿಲ್ಲ ಎಂದು ಹೇಳಿದರು.

ಶೈಕ್ಷಣಿಕ ಸಂಯೋಜಕರ ನೇಮಕಾತಿ ಪ್ರಕ್ರಿಯೆಯಲ್ಲೂ ವಿಳಂಬವಾಗುತ್ತಿದ್ದು, ಇದರಿಂದ ಸಾವಿರಾರು ಅತಿಥಿ ಉಪನ್ಯಾಸಕರು



ಅನಿಶ್ಚಿತತೆಯಲ್ಲೇ ಸೇವೆ ಸಲ್ಲಿಸುವಂತಾಗಿದೆ. ನೇಮಕಾತಿ ಪ್ರಕ್ರಿಯೆಯನ್ನು ತ್ವರಿತಗೊಳಿಸಿ ಅರ್ಹ ಅತಿಥಿ ಉಪನ್ಯಾಸಕ-ರಿಗೆ ನ್ಯಾಯಯುತ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

2009ರೊಳಗೆ ಪಡೆದಿರುವ ಎಂಫಿಲ್ ಪದವಿಯನ್ನು ಯುಜಿಸಿ ಅರ್ಹತೆಯ ಮಾನದಂಡವಾಗಿ ಪರಿಗಣಿಸಬೇಕು. ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಉದ್ಯೋಗ ಹಾಗೂ ಸೇವಾ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು. ಸೇವಾ ಭದ್ರತೆ ಹಾಗೂ ಶೈಕ್ಷಣಿಕ ಸಂಯೋಜಕರ ನೇಮಕಾತಿ ಸೇರಿದಂತೆ ಬೇಡಿಕೆಗಳ ಕು-ರಿತು ಸರ್ಕಾರದ ನಿರ್ಲಕ್ಷ್ಯ ಮುಂದುವರಿದರೆ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳದಿದ್ದಲ್ಲಿ ವಿಧಾನ ಪರಿಷತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಮತದಾನ ಬಹಿಷ್ಕಾರದ ನಿರ್ಧಾರ ಕೈಗೊಳ್ಳುವ ಕುರಿತು ಸಂಘದ ನಿಲುವು ಪ್ರಕಟಿಸಲಾಗುವುದು ಎಂದು ಡಾ. ಹನುಮಂತಗೌಡ ಕಲ್ಮನಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಗದಗ ಜಿಲ್ಲಾ ಘಟಕದ ಪ್ರಮುಖರು ಉಪಸ್ಥಿತರಿದ್ದರು.

# ಸುರಕ್ಷಿತ ಗರ್ಭಪಾತ ಸೇವೆ ಪ್ರತಿಯೊಬ್ಬ ಮಹಿಳೆಯ ಹಕ್ಕು

**ವಿಜಯಸಾಕ್ಷಿ ಸುದ್ದಿ, ಗದಗ**

ಕಾನೂನುಬದ್ಧ, ಸುರಕ್ಷಿತ ಹಾಗೂ ಕಳಂಕರಹಿತ ಗರ್ಭಪಾತ ಸೇವೆಗಳು ಪ್ರತಿಯೊಬ್ಬ ಮಹಿಳೆಗೆ ತಲುಪುವಂತೆ ಮಾಡುವ ಉದ್ದೇಶ ದಿಂದ ಗದಗದಲ್ಲಿ ಸೋಮವಾರ ಅಂತರರಾಷ್ಟ್ರೀಯ ಸುರಕ್ಷಿತ ಗರ್ಭಪಾತ ಸೇವೆಗಳ ದಿನಾಚರಣೆ ಆಚರಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಜಿಲ್ಲಾ ಐ.ಇ.ಸಿ ವಿಭಾಗ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ಗುರಮ್ಮ ನರ್ಸಿಂಗ್ ಕಾಲೇಜು ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಹಿಂದೆ ಅಸುರಕ್ಷಿತ ರೀತಿಯಲ್ಲಿ ಗರ್ಭಪಾತ ಮಾಡಿಸಿಕೊಳ್ಳುತ್ತಿದ್ದ ಕಾರಣ ಅನೇಕ ತಾಯಂದಿರು ಪ್ರಾಣ ಕಳೆದುಕೊಳ್ಳುತ್ತಿದ್ದರು. ಈಗ



ಕಾನೂನುಬದ್ಧವಾಗಿ ಅಗತ್ಯವಿದ್ದ ಸಂದರ್ಭದಲ್ಲಿ ತಜ್ಞ ವೈದ್ಯರಿಂದ ಸುರಕ್ಷಿತ ಗರ್ಭಪಾತ ಸೇವೆ ಪಡೆಯಬೇಕು ಎಂದು ಸಲಹೆ ನೀಡಿದರು. ಗರ್ಭದಲ್ಲಿರುವ ಮಗುವಿನ ಲಿಂಗ ಪತ್ತೆ ಮಾಡಿ ಗರ್ಭಪಾತ ಮಾಡಿಸುವುದು ಕಾನೂನುಬಾಹಿರವಾಗಿದೆ.

ಗಂಭೀರ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆಯಿದೆ. ಹೀಗಾಗಿ ಸುರಕ್ಷಿತ ಗರ್ಭಪಾತ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಹಾಗೂ ಸಮುದಾಯ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಪ್ರಭಾರ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮದ ಅನುಷ್ಠಾನಾಧಿಕಾರಿ ಡಾ. ಹೆಚ್.ಎಲ್. ಗಿರಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ನರ್ಸಿಂಗ್ ವಿಭಾಗದ ಮುಖ್ಯಸ್ಥ ಕೃಷ್ಣ ಗುಜ್ಜರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪುಷ್ಪಾ ಪಾಟೀಲ, ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಕೊಪ್ಪಳ, ಸಹಾಯಕ ಸಾಂಖ್ಯಿಕ ಅಧಿಕಾರಿ ಜ್ಯೋತಿ ಹೊಸಮನಿ, ನರ್ಸಿಂಗ್ ಅಧಿಕಾರಿ ಶಾರದಾ ಪಾಟೀಲ ಸೇರಿದಂತೆ ಆರೋಗ್ಯ ಇಲಾಖೆ ಹಾಗೂ ಗುರಮ್ಮ ನರ್ಸಿಂಗ್ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎಫ್. ಹನಕನಹಳ್ಳಿ ಸ್ವಾಗತಿಸಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಗಡಾದ ವಂದಿಸಿದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಕಾರ್ಯಕ್ರಮ ನಿರೂಪಿಸಿದರು.ಈ ಸಂದರ್ಭದಲ್ಲಿ ಸುರಕ್ಷಿತ ಗರ್ಭಪಾತದ ಕುರಿತು ಮಾಹಿತಿಯುಳ್ಳ ಮಡಿಕೆ ಪತ್ರಗಳನ್ನು ಬಿಡುಗಡೆ ಮಾಡಲಾಯಿತು.

> ಕಾನೂನುಬದ್ಧ, ಸುರಕ್ಷಿತ ಮತ್ತು ಕಳಂಕರಹಿತ ಗರ್ಭಪಾತ ಸೇವೆಗಳು ಪ್ರತಿಯೊಬ್ಬ ಮಹಿಳೆಗೂ ತಲುಪಬೇಕು. ಅಸುರಕ್ಷಿತ ಗರ್ಭಪಾತದಿಂದ ಸಂಭವಿಸುವ ತಾಯಿ ಸಾವುಗಳನ್ನು ತಡೆಯಲು ಸಮುದಾಯದಲ್ಲಿ ಸಮಗ್ರ ಜಾಗೃತಿ ಮೂಡಿಸುವುದು ಅಗತ್ಯ.
>
> – ಡಾ. ಹೆಚ್.ಎಲ್. ಗಿರಡ್ಡಿ, ಪ್ರಭಾರ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮದ ಅನುಷ್ಠಾನಾಧಿಕಾರಿ, ಗದಗ

### ಔಷಧ ವಾಣಿಜ್ಯ ವಸ್ತುವಲ್ಲ, ಆರೋಗ್ಯದ ಅಮೂಲ್ಯ ಸಂಪತ್ತು: ಸದಾಶಿವಾನಂದ ಶ್ರೀ

# ಮನುಕುಲದ ಆರೋಗ್ಯವೇ ಔಷಧ ತಜ್ಞರ ಗುರಿಯಾಗಲಿ




> ಔಷಧವನ್ನು ಕೇವಲ ವಾಣಿಜ್ಯ ವಸ್ತುವಾಗಿ ನೋಡದೆ, ಮನುಕುಲದ ಆರೋಗ್ಯಕ್ಕಾಗಿ ದೊರೆತ ಅಮೂಲ್ಯ ಸಂಪತ್ತು ಎಂಬ ಭಾವನೆಯಿಂದ ಔಷಧ ತಜ್ಞರು ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಮನುಕುಲದ ಆರೋಗ್ಯವೇ ಔಷಧ ತಜ್ಞರ ಸೇವೆಯ ಗುರಿಯಾಗಲಿ.
>
> – ಜ.ಸದಾಶಿವಾನಂದ ಭಾರತಿ ಮಹಾಸ್ವಾಮೀಜಿ

**ವಿಜಯಸಾಕ್ಷಿ ಸುದ್ದಿ, ಗದಗ**

ನಗು, ನಡಿಗೆ, ಆರೋಗ್ಯಕರ ಆಹಾರ, ಶುದ್ಧ ಗಾಳಿ ಹಾಗೂ ಉತ್ತಮ ಬಿಸಿಲು ಕೂಡ ಶಕ್ತಿಶಾಲಿ ಔಷಧಗಳಾಗಿವೆ. ಇವುಗಳಿಂದ ದೇಹಕ್ಕೆ ಅಗತ್ಯ ಆರೋಗ್ಯ ದೊರೆಯದಾಗ ಮಾತ್ರ ಹೊರಗಿನ ಔಷಧದ ಅವಶ್ಯಕತೆ ಬರುತ್ತದೆ. ಹೀಗಾಗಿ ಔಷಧ ತಜ್ಞರು ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು ಎಂದು ಗದುಗಿನ ಶಿವಾನಂದ ಬೃಹನ್ಮಠದ ಪೂಜ್ಯ ಜ.ಸದಾಶಿವಾನಂದ ಭಾರತಿ ಮಹಾಸ್ವಾಮೀಜಿ ಹೇಳಿದರು.

ನಗರದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ಭಾನುವಾರ ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘವು ಎಲ್ಲ ತಾಲೂಕು ಘಟಕಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಔಷಧ ತಜ್ಞರ ದಿನಾಚರಣೆ ಹಾಗೂ 2026ರ ಕೆಮಿಸ್ಟ್ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಭಾರತೀಯ ಪರಂಪರೆಯಲ್ಲಿ ಔಷಧ ವಿಜ್ಞಾನಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ. ಪ್ರಕೃತಿಯಲ್ಲಿರುವ ಸಸ್ಯ, ಎಲೆ, ಬೇರು, ಕಾಂಡ, ಹೂವು ಹಾಗೂ ಕಾಯಿಗಳಲ್ಲಿಯೂ ಔಷಧೀಯ ಗುಣವಿದೆ. ಆದರೆ ಅದರ ಗುಣವನ್ನು ಗುರುತಿಸಿ, ಸರಿಯಾದ ಸಮಯದಲ್ಲಿ ಸರಿಯಾದ ಪ್ರಮಾಣದಲ್ಲಿ ಬಳಸುವ ಜ್ಞಾನ ಅತ್ಯಗತ್ಯ. ರಾಮಾಯಣದ ಸುಷೇಣ ವೈದ್ಯನ ಪ್ರಸಂಗವನ್ನು ಉಲ್ಲೇಖಿಸಿದ ಅವರು, ಸಮಯ ಹಾಗೂ ಪ್ರಮಾಣ ತಪ್ಪಿದರೆ ಔಷಧದ ಪರಿಣಾಮವೂ ಬದಲಾಗಬಹುದು ಎಂದು ಎಚ್ಚರಿಸಿದರು.

ಔಷಧವನ್ನು ಕೇವಲ ವಾಣಿಜ್ಯ ವಸ್ತುವಾಗಿ ನೋಡದೆ, ಮನುಕುಲದ ಆರೋಗ್ಯಕ್ಕಾಗಿ ದೊರೆತ ಅಮೂಲ್ಯ ಸಂಪತ್ತು ಎಂಬ ಭಾವನೆಯಿಂದ ಕಾರ್ಯನಿರ್ವಹಿಸಬೇಕು.

ಔಷಧ ಸಂಶೋಧನೆ ಹಾಗೂ ಬಳಕೆಯಲ್ಲಿ ಶುದ್ಧತೆ ಮತ್ತು ನೈತಿಕತೆ ಕಾಪಾಡಬೇಕು ಎಂದರು.

ಗದಗ ವೃತ್ತದ ಸಹಾಯಕ ಔಷಧ ನಿಯಂತ್ರಕ ಪ್ರಭಾರಿ ಸಂಗಣ್ಣ ಶೀಳಿ ಮಾತನಾಡಿ, ಔಷಧ ತಜ್ಞರು ರೋಗಿ, ಔಷಧ ಹಾಗೂ ಆರೋಗ್ಯ ವ್ಯವಸ್ಥೆಯ ನಡುವಿನ ವಿಶ್ವಾಸದ ಕೊಂಡಿಯಾಗಿದ್ದಾರೆ. ಎಐ, ಜೀನ್ ಥೆರಪಿ ಹಾಗೂ ಸ್ಟೆಮ್ ಸೆಲ್ ತಂತ್ರಜ್ಞಾನ ಸೇರಿದಂತೆ ಹೊಸ ಬೆಳವಣಿಗೆಗಳ ಕುರಿತು ನಿರಂತರ ಜ್ಞಾನ ಪಡೆಯಬೇಕು ಎಂದರು.

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಮಾತನಾಡಿದರು. ಸಂಘದ ಅಧ್ಯಕ್ಷ ಆರ್.ಬಿ. ದಾನಪ್ಪಗೌಡ್ರ ಅಧ್ಯಕ್ಷತೆ ವಹಿಸಿದ್ದರು. ಚೇಂಬರ್ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ, ಮಾಲತೇಶ ರಮಾಣಿ, ಎಂ.ಎ. ಲಿಂಗನಗೌಡ್ರ ಹಾಗೂ ಎಂ.ಡಿ. ಕಾಬಳ್ಳಿ ಉಪಸ್ಥಿತರಿದ್ದರು.

ಸುರೇಶ ನಿಡಗುಂದಿ, ರುದ್ರಗೌಡ್ರ ಅಯ್ಯನಗೌಡ್ರ, ಅನಿಲರಡ್ಡಿ ಕರೂರ, ಸಂಜೀವರಡ್ಡಿ ಚಿಂತಕೂಲಾ, ಉಮೇಶ ಮೆಣಸಗಿ ಸೇರಿದಂತೆ 11 ಮಂದಿಗೆ 2026ರ ಕೆಮಿಸ್ಟ್ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಬಸವರಾಜ ಕುಸನೂರ, ಚನ್ನಬಸಪ್ಪ ರಡ್ಡೇರ ಹಾಗೂ ಗುರುಸಿದ್ಧಪ್ಪ ಪಿರಂಗಿ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಮಂಜುಳಾ ಕುಬಸದ ಪ್ರಾರ್ಥಿಸಿದರು. ಆರ್.ಇ. ನದಾಫ ನಿರೂಪಿಸಿದರು. ಕಾರ್ಯದರ್ಶಿ ಜ್ಞಾನೇಶ್ವರ ಖೋಕಲೆ ವಂದಿಸಿದರು.

## ಶಿಕ್ಷಕರ ಸೇವೆಗೆ ವಿಶ್ವಕರ್ಮ ಸಮಾಜದಿಂದ ಗೌರವ




**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇಲ್ಲಿನ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ಪಾಲಕಿ ಉತ್ಸವ ಹಾಗೂ ಚಿಂತನಗೋಷ್ಠಿ ಅಂಗವಾಗಿ ವಿಶ್ವಕರ್ಮ ಸಮಾಜದ ಕಾಳಿಕಾದೇವಿ ಟ್ರಸ್ಟ್ ಕಮಿಟಿ, ಶರನ್ನವರಾತ್ರಿ ಉತ್ಸವ ಸಮಿತಿ ಹಾಗೂ ವಿಶ್ವಕರ್ಮ ಗಾಯತ್ರಿ ಮಹಿಳಾ ಮಂಡಳಿ ಸಹಯೋಗದಲ್ಲಿ ಸಂಭ್ರಮದ ಗುರುವಂದನಾ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ವಿವಿಧ ಶಾಲಾ–ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಹಾಗೂ ಉಪನ್ಯಾಸಕರನ್ನು ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಗಜೇಂದ್ರಗಡ, ಬೆಟಗೇರಿ, ಗದಗ, ರೋಣ ಸೇರಿದಂತೆ ವಿವಿಧೆಡೆ ಸೇವೆ ಸಲ್ಲಿಸುತ್ತಿರುವ ಎಸ್.ಎನ್. ಬಡಿಗೇರ, ಶಿವಕುಮಾರ ಬಡಿಗೇರ, ಅಶೋಕ ಪತ್ತಾರ, ಸತೀಶ ಹೊರಪೇಟ, ರವಿ ಬಡಿಗೇರ, ಮಾಲತೇಶ ಬಡಿಗೇರ, ನಾಗರಾಜ ಬಡಿಗೇರ, ಮಂಜುನಾಥ ಅಕ್ಕಸಾಲಿ, ಕವಿತಾ ಬಡಿಗೇರ, ಜ್ಯೋತಿ ಬಡಿಗೇರ, ಸರಸ್ವತಿ ಬಡಿಗೇರ, ಭಾರತಿ ಹೊರಪೇಟ ಹಾಗೂ ವಿಶ್ವನಾಥ ಕಮ್ಮಾರ ಸೇರಿದಂತೆ ಶಿಕ್ಷಕರನ್ನು ಗೌರವಿಸಲಾಯಿತು.

ಮೂರು ದಶಕಗಳಿಗೂ ಹೆಚ್ಚು ಕಾಲ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳ ಬದುಕು ರೂಪಿಸಿದ ನಿವೃತ್ತ ಶಿಕ್ಷಕಿ ನರೇಗಲ್ಲ ರತ್ನಮ್ಮ ತೋಟಗಂಟಿ ಹಾಗೂ ವಿವಿಧ ಶಾಲೆಗಳಲ್ಲಿ ಶಿಕ್ಷಕ, ಪ್ರಭಾರಿ ಮುಖ್ಯೋಪಾಧ್ಯಾಯ ಮತ್ತು ಸಿಆರ್‌ಸಿ ಸಂಯೋಜಕರಾಗಿ ಸೇವೆ ಸಲ್ಲಿಸಿದ ಗದಗದ ಆನಂದ ಕಮ್ಮಾರ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಯ ಪ್ರಾಚಾರ್ಯ ಕೆ.ಡಿ. ಬಡಿಗೇರ ಶಿಕ್ಷಕರ ವೃತ್ತಿಯ ಮಹತ್ವ ಕುರಿತು ಮಾತನಾಡಿದರು.

ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಎನ್.ಐ. ಪತ್ತಾರ ಅಧ್ಯಕ್ಷತೆ ವಹಿಸಿದ್ದರು. ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಉಪನ್ಯಾಸಕ ಜಿ.ಡಿ. ದಾಸರ, ಇ.ಸಿ.ಓ ಬಿ.ವೈ. ಡೊಳ್ಳಿನ, ಸುರೇಶ ಕೊಪ್ಪದ, ಶಿವಲೀಲಾ ಬಡಿಗೇರ ಸೇರಿದಂತೆ ಹಲವರು ಭಾಗವಹಿಸಿದ್ದರು.

### ತಾಯಿ-ಮಕ್ಕಳ ಆರೋಗ್ಯಕ್ಕೆ ಪೌಷ್ಟಿಕತೆಯ ಬಲ

# ಪೋಷಣ ಮಾಸಕ್ಕೆ ಪೌಷ್ಟಿಕತೆಯ ಕಾಳಜಿ




> ಮಕ್ಕಳ ಹಾಗೂ ತಾಯಂದಿರ ಆರೋಗ್ಯ ಕಾಪಾಡುವಲ್ಲಿ ಪೌಷ್ಟಿಕ ಆಹಾರದ ಮಹತ್ವವನ್ನು ಅರಿತು, ಈ ಕುರಿತು ನಿರಂತರ ಜಾಗೃತಿ ಮೂಡಿಸುವುದು ಅಗತ್ಯ.
>
> –ದುರ್ಗೇಶ್ ವಿಭೂತಿ, ಸ್ಥಳೀಯ ಮುಖಂಡ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಪೋಷಣ ಅಭಿಯಾನ ಯೋಜನೆಯಡಿ ನಡೆಯುತ್ತಿರುವ ಪೋಷಣ ಮಾಸಾಚರಣೆಯ ಅಂಗವಾಗಿ ಗದಗ ನಗರದ ಶ್ರೀರಾಮನಗರದ ಸುಡುಗಾಡು ಸಿದ್ದರ ಸಮುದಾಯ ಭವನದಲ್ಲಿ ಶುಕ್ರವಾರ 'ನಮ್ಮ ಅಂಗನವಾಡಿ–ನಮ್ಮ ಜವಾಬ್ದಾರಿ' ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಗರ್ಭಿಣಿಯರ ಸೀಮಂತ ಕಾರ್ಯಕ್ರಮ ನೆರವೇರಿಸಿ, ತಾಯಂದಿರಿಗೆ ಆತ್ಮಸ್ಥೈರ್ಯ ತುಂಬಲಾಯಿತು.

ಇದೇ ವೇಳೆ ಅನ್ನಪ್ರಾಶನ ಕಾರ್ಯಕ್ರಮ, 'ಬೇಟಿ ಬಚಾವೋ–ಬೇಟಿ ಪಡಾ ವೋ' ಯೋಜನೆಯಡಿ ಹೆಣ್ಣು ಮಕ್ಕಳ ಜನ್ಮೋತ್ಸವ ಹಾಗೂ ಕೇಕ್ ಕತ್ತರಿಸುವ ಕಾರ್ಯಕ್ರಮವೂ ನಡೆಯಿತು.

ಪೋಷಣ ವಾಟಿಕಾ ಯೋಜನೆಯಡಿ ಅಂಗನವಾಡಿ ಆವರಣದಲ್ಲಿ ಗಿಡಗಳನ್ನು ನೆಡುವ ಮೂಲಕ ಪರಿಸರ ಕಾಳಜಿಯ ಸಂದೇಶ ಸಾರಲಾಯಿತು.

ಮೂರರಿಂದ ಆರು ವರ್ಷದ ಮಕ್ಕಳಿಗೆ ನೀಡ ಬೇಕಾದ ಆಹಾರದ ಕುರಿತು ಮೆನು ಚಾರ್ಟ್–9ರ ಪ್ರಾತ್ಯಕ್ಷಿಕೆ ನೀಡಲಾಯಿತು. ಸ್ಥಳೀಯ ಮುಖಂಡ ದುರ್ಗೇಶ್ ವಿಭೂತಿ ಮಾತನಾಡಿ, ತಾಯಿ ಮತ್ತು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಪೌಷ್ಟಿಕ ಆಹಾರ ಅತ್ಯಂತ ಮಹತ್ವದ್ದಾಗಿದೆ.

ಮಕ್ಕಳ ಉತ್ತಮ ಬೆಳವಣಿಗೆ ಹಾಗೂ ತಾಯಂದಿರ ಆರೋಗ್ಯ ಕಾಪಾಡುವಲ್ಲಿ ಪೌಷ್ಟಿಕ ಆಹಾರದ ಬಗ್ಗೆ ಜಾಗೃತಿ ಅಗತ್ಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಡಿಪಿಒ ಸುರೇಖಾ ಮಲ್ಲಾಪುರ, ಸೂಪರ್‌ವೈಸರ್ ಫಾತಿಮಾ ಚಳಕೆ, ಸಿಡಿಪಿಒ ರೇಣುಕಾ ಮಾಗಡಿ, ಪೋಷಣ ಅಭಿಯಾನದ ಜಿಲ್ಲಾ ಸಹಾಯಕ ಪವನ್ ಕಟೇಗಾರ್, ಡಾ. ಕಬಾಡಿ, ಡಾ. ಕೊಪ್ಪಳ ಸೇರಿದಂತೆ ಅಧಿಕಾರಿಗಳು, ವೈದ್ಯರು ಹಾಗೂ ಸ್ಥಳೀಯ ಮುಖಂಡರು ಪಾಲ್ಗೊಂಡಿದ್ದರು.

ಮರಿಯಪ್ಪ ವಿಭೂತಿ, ಯಲ್ಲಪ್ಪ ವಿಭೂತಿ, ದುರಗಪ್ಪ ವಿಭೂತಿ, ಲಕ್ಷ್ಮಣ ವಿಭೂತಿ, ರಮೇಶ್ ವಿಭೂತಿ, ಅಶೋಕ ಗಡ್ಡ, ಶರಣಪ್ಪ ಕರಿ, ಸಣ್ಣ ಯಲ್ಲಪ್ಪ ವಿಭೂತಿ ಹಂಚಿನಮನಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು, ಮಹಿಳೆಯರು, ಮಕ್ಕಳು, ಪೋಷಕರು, ಯುವಕರು ಹಾಗೂ ಸ್ಥಳೀಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಸದೃಢ ವ್ಯಕ್ತಿತ್ವ ನಿರ್ಮಾಣದಲ್ಲಿ ಎನ್‌ಎಸ್‌ಎಸ್ ಪಾತ್ರ ಮಹತ್ವದ್ದು



**ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ 2026–27ನೇ ಸಾಲಿನ ಎನ್‌ಎಸ್–ಎಸ್ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪಿಪಿಜಿ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಅರ್ಥಶಾಸ್ತ್ರ ಉಪನ್ಯಾಸಕ ಡಾ. ವಿ.ಎ. ನಿಂಗೋಜಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ಸಾಮಾಜಿಕ ಜವಾಬ್ದಾರಿಯನ್ನೂ ಅರಿಯಬೇಕು. ಎನ್‌ಎಸ್‌ಎಸ್‌ನಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಸಾಮಾಜಿಕ ಹೊಣೆಗಾರಿಕೆ, ನಾಯಕತ್ವ ಗುಣ ಹಾಗೂ ಸದೃಢ ವ್ಯಕ್ತಿತ್ವ ಬೆಳೆಯುತ್ತದೆ ಎಂದು ಹೇಳಿದರು.

'ನನಗಾಗಿಯಲ್ಲ, ನಿನಗಾಗಿ' ಎಂಬ ಧ್ಯೇಯವಾಕ್ಯದೊಂದಿಗೆ ಎನ್‌ಎಸ್‌ಎಸ್ ಯುವಜನರಲ್ಲಿ ಸಮುದಾಯದ ಸಹಭಾಗಿತ್ವ ಹಾಗೂ ಸೇವಾ ಮನೋಭಾವ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ವಿದ್ಯಾರ್ಥಿಗಳು ಯೋಜನೆಯ ಸದುಪಯೋಗ ಪಡೆದುಕೊಂಡು ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾ. ಎಂ.ಎಂ. ಬುರಡಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಮುಂದಾಳತ್ವದ ಗುಣ ಹಾಗೂ ಯಾವುದೇ ಕಾರ್ಯವನ್ನು ಸಮರ್ಥವಾಗಿ ನಿರ್ವಹಿಸುವ ಸಾಮರ್ಥ್ಯ ಬೆಳೆಸುವಲ್ಲಿ ಎನ್‌ಎಸ್‌ಎಸ್ ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದ ಆರಂಭದಲ್ಲಿ ಕುಮಾರಿ ಸಂಗೀತಾ ಹಾಗೂ ಸಂಗಡಿಗರು ಎನ್‌ಎಸ್‌ಎಸ್ ಗೀತೆ ಹಾಡಿದರು. ಎನ್‌ಎಸ್–ಎಸ್ ಅಧಿಕಾರಿ ಪ್ರೊ. ಮಾರುತಿ ಶಿರುಂಧ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. 2024ರಿಂದ 2026ರವರೆಗೆ ಎನ್‌ಎಸ್‌ಎಸ್ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು. ಪ್ರೊ. ಶ್ವೇತಾ ಸಿ. ಕಾರ್ಯಕ್ರಮ ನಿರೂಪಿಸಿ ವಂದನಾರ್ಪಣೆ ಸಲ್ಲಿಸಿದರು.

## ದಸರಾ ಕ್ರೀಡಾಕೂಟದಲ್ಲಿ ಕೆ.ಎಚ್. ಪಾಟೀಲ ಕಾಲೇಜು ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಸೆ.23 ಮತ್ತು 24ರಂದು ನಡೆದ 2026–27ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ಅಥ್ಲೆಟಿಕ್ಸ್ ಸ್ಪರ್ಧೆಯಲ್ಲಿ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದಾರೆ.

4x100 ಮೀಟರ್ ಓಟದಲ್ಲಿ ವೆಂಕಣ್ಣ ಶಳಕೆ ಹಾಗೂ ಈರಣ್ಣ ಕಾಲಗ್ಗಗರಿ ಪ್ರಥಮ ಸ್ಥಾನ ಪಡೆದರೆ, 800 ಮೀಟರ್ ಓಟದಲ್ಲಿ ಅಲ್ಲಾಭಕ್ಷಿ ಬಿಂಕದಕಟ್ಟಿ ಪ್ರಥಮ ಸ್ಥಾನ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಸಾಧಕ ವಿದ್ಯಾರ್ಥಿಗಳನ್ನು ಕಾಲೇಜಿನಲ್ಲಿ ವಿಶೇಷವಾಗಿ ಅಭಿನಂದಿಸಲಾಯಿತು. ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಕ್ರೀಡಾ ಚಟುವಟಿಕೆಗಳಲ್ಲೂ ಸಕ್ರಿಯ ವಾಗಿ ತೊಡಗಿಸಿಕೊಂಡರೆ ಸರ್ವಾಂಗೀಣ ಬೆಳವಣಿಗೆ ಸಾಧ್ಯ. ಗ್ರಾಮೀಣ ವಿದ್ಯಾರ್ಥಿಗಳ ಕ್ರೀಡಾ ಪ್ರತಿಭೆ ಅನಾವರಣಕ್ಕೆ ಇಂತಹ ಕ್ರೀಡಾಕೂಟಗಳು ಉತ್ತಮ ವೇದಿಕೆಯಾಗಿವೆ ಎಂದು ಹೇಳಿದರು. ಕ್ರೀಡಾ ವಿಭಾಗದ ಸಂಚಾಲಕ ಹಾಗೂ ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಮಹಾಂತೇಶ ಮಾತನಾಡಿ, ಕ್ರೀಡೆ ವಿದ್ಯಾರ್ಥಿಗಳಲ್ಲಿ ಶಿಸ್ತು, ಪರಿಶ್ರಮ ಹಾಗೂ ಒಗ್ಗಟ್ಟಿನ ಗುಣ ಬೆಳೆಸುತ್ತದೆ. ನಿರಂತರ ಅಭ್ಯಾಸದ ಮೂಲಕ ಇನ್ನಷ್ಟು ಸಾಧನೆ ಮಾಡುವಂತೆ ಕರೆ ನೀಡಿದರು.

ದೈಹಿಕ ಶಿಕ್ಷಣ ಉಪನ್ಯಾಸಕಿ ಡಾ. ಶೋಭಾ ಪಿ. ಅಡಕಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಭೀಮೇಶ ಸ್ವಾಗತಿಸಿದರು. ಬಸವರಾಜ ಬಳಗಾನೂರು ಮಠ ವಂದಿಸಿದರು.

IQAC ಸಂಚಾಲಕ ಡಾ. ಜಿತೇಂದ್ರ ಜಹಾಗಿರ್ದಾರ, ಕನ್ನಡ ವಿಭಾಗದ ಮುಖ್ಯಸ್ಥ ರಮೇಶ್ ಹುಲಕುಂದ, ಗಣಿತಶಾಸ್ತ್ರ ಸಹ ಪ್ರಾಧ್ಯಾಪಕಿ ಡಾ. ಸಾರಿಕಾ ಪಾಟೀಲ್, ಕಲಾ ವಿಭಾಗದ ಮುಖ್ಯಸ್ಥೆ ಮಹಾನಂದ ಹಿರೇಮಠ ಸೇರಿದಂತೆ ಉಪನ್ಯಾಸಕರು ಉಪಸ್ಥಿತರಿದ್ದು ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

## ಕಾಳಿಕಾದೇವಿ ದೇಗುಲದಲ್ಲಿ ನವರಾತ್ರಿ ಸಂಭ್ರಮಕ್ಕೆ ಸಿದ್ಧತೆ




**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ಪ್ರಸಕ್ತ ಸಾಲಿನ ಶರನ್ನವರಾತ್ರಿ ಉತ್ಸವವನ್ನು ಅದ್ದೂರಿಯಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸುವ ಕುರಿತು ಟ್ರಸ್ಟ್ ಕಮಿಟಿ ಅಧ್ಯಕ್ಷ ಶ್ರೀಧರ್ ಕೊಣ್ಣೂರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ನವರಾತ್ರಿ ಉತ್ಸವದ ಹತ್ತು ದಿನಗಳ ಕಾಲ ಬೆಳಗ್ಗೆ ಅಭಿಷೇಕ, ಸಂಜೆ ಪುರಾಣ ಪ್ರವಚನ ಹಾಗೂ ನಂತರ ಪ್ರಸಾದ ವಿತರಣೆ ಮುಂದುವರಿಸಲು ನಿರ್ಧರಿಸಲಾಯಿತು. ಸಮಾಜದ ಕಲಾವಿದ ಶ್ರೀಕಾಂತ್ ಬಡಿಗೇರ ನಿರ್ಮಿಸುವ ನವದುರ್ಗೆಯರ ಪ್ರತಿಮೆಗಳನ್ನು ಒಂಬತ್ತು ದಿನಗಳ ಕಾಲ ಪ್ರತಿಷ್ಠಾಪಿಸಲು ತೀರ್ಮಾನಿಸಲಾಯಿತು.

ಶರನ್ನವರಾತ್ರಿ ಉತ್ಸವ ಸಮಿತಿ–2026ಕ್ಕೆ ವಿಶ್ವನಾಥ ಪತ್ತಾರ ಅಧ್ಯಕ್ಷ, ವಿಜಯಕುಮಾರ ಬೆಂತೂರ ಗೌರವಾಧ್ಯಕ್ಷರಾಗಿ ನೇಮಕಗೊಂಡಿದ್ದು, 25 ಯುವಕರ ತಂಡವನ್ನು ರಚಿಸಲಾ ಯಿತು. ದುರ್ಗಾಷ್ಟಮಿ ದಿನ ವಿಶ್ವಕರ್ಮ ಗಾಯತ್ರಿ ಮಹಿಳಾ ಮಂಡಳಿಯಿಂದ ಉಡಿ ತುಂಬುವ ಭಕ್ತಿ ಸೇವೆ ಆಯೋಜಿಸಲು ನಿರ್ಧರಿಸಲಾಯಿತು. ಉತ್ಸವದ ಅಂಗವಾಗಿ ಪ್ರತಿಭಾ ಪುರಸ್ಕಾರ, ಮೌನೇಶ್ವರ ವಚನ ಪಠಣ, ರಂಗೋಲಿ, ಕ್ಲೇ ಮಾಡಲಿಂಗ್, ವೇಷಭೂಷಣ ಸ್ಪರ್ಧೆ ಹಾಗೂ ಮಹಿಳೆಯರಿಗೆ ಮನರಂಜನಾ ಆಟಗಳನ್ನು ಆಯೋಜಿಸಲಾಗುವುದು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವ ಹಾಗೂ ವಿಜೇತರಾಗುವವರಿಗೆ ಆಕರ್ಷಕ ಬಹುಮಾನ ನೀಡಿ ಪ್ರೋತ್ಸಾಹಿಸಲು ತೀರ್ಮಾನಿಸಲಾಯಿತು.

ಮಹಿಳಾ ಮಂಡಳಿಯಿಂದ ಪ್ರತಿದಿನ ಸಂಜೆ ಲಲಿತ ಸಹಸ್ರನಾಮಾವಳಿ, ಕುಂಕುಮಾರ್ಚನೆ ಹಾಗೂ ನಿಂಬೆಹಣ್ಣಿನ ಆರತಿ ನೆರವೇರಲಿದೆ. ಭಕ್ತರು ವಿಶೇಷ ಪೂಜೆ ಹಾಗೂ ಪ್ರಸಾದ ಸೇವೆಗಾಗಿ ಹಿಂದಿನಂತೆ ₹401 ನೀಡಲು ಹಾಗೂ ಒಂದು ದಿನದ ಪ್ರಸಾದ ಸೇವೆ ಪ್ರಾಯೋಜಿಸಲು ₹5 ಸಾವಿರ ದೇಣಿಗೆ ನಿಗದಿಪಡಿಸಲಾಯಿತು.

ದೇವಸ್ಥಾನದ ನೂತನ ಗೋಪುರದ ಕಳಸಾರೋಹಣ ಕಾರ್ಯಕ್ರಮವನ್ನು 2027ರ ಜನವರಿ ಸಂಕ್ರಮಣದ ಬಳಿಕ ನಡೆಸಲು ಸಭೆ ನಿರ್ಧರಿಸಿತು. ಗೋಪುರ ನಿರ್ಮಾಣಕ್ಕೆ ₹25 ಸಾವಿರ ದೇಣಿಗೆ ನೀಡಿದ ಭಕ್ತರ ಛಾಯಾಚಿತ್ರಗಳನ್ನು ನವರಾತ್ರಿ ಪೂರ್ವದಲ್ಲಿ ಸಮುದಾಯ ಭವನದಲ್ಲಿ ಅನಾವರಣಗೊಳಿಸಲು ಹಾಗೂ ₹5 ಸಾವಿರಕ್ಕಿಂತ ಹೆಚ್ಚಿನ ದೇಣಿಗೆ ನೀಡಿದವರ ಹೆಸರುಗಳನ್ನು ಕಲ್ಲಿನ ನಾಮಫಲಕದಲ್ಲಿ ದಾಖಲಿಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಟ್ರಸ್ಟ್ ನಿರ್ದೇಶಕ ರಾಘವೇಂದ್ರ ಬಡಿಗೇರ ಪ್ರಾರ್ಥನೆ ಸಲ್ಲಿಸಿದರು. ಪ್ರಧಾನ ಕಾರ್ಯದರ್ಶಿ ಎನ್.ಐ. ಪತ್ತಾರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವನಾಥ ಕಮ್ಮಾರ ನಿರೂಪಿಸಿದರು. ಉಪಾಧ್ಯಕ್ಷ ಅಶೋಕ ಸುತಾರ ವಂದಿಸಿದರು.

## ಮಹಿಳೆಯರಿಗೆ ಉಚಿತ ಸೌಂದರ್ಯ ತರಬೇತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಬರುವ ದಸರಾ ಹಬ್ಬದ ಹಿನ್ನೆಲೆಯಲ್ಲಿ ಹೆಣ್ಣು ಮಕ್ಕಳು ಸ್ವತಃ ಅಲಂಕರಿಸಿಕೊಳ್ಳುವ ಮೂಲಕ ಸಮಯ ಹಾಗೂ ಹಣ ಉಳಿತಾಯ ಮಾಡಿಕೊಳ್ಳಲು ಅನುಕೂಲವಾಗುವಂತೆ ಗದಗ ನಗರದ ಸರಾಫ್ ಬಜಾರ್‌ನ ಜಗದಂಬಾ ದೇವಸ್ಥಾನದ ಸಭಾಂಗಣದಲ್ಲಿ ಎರಡು ದಿನಗಳ ಉಚಿತ ಸೌಂದರ್ಯ ತರಬೇತಿ ನೀಡಲಾಯಿತು. ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದ ಪದಾಧಿಕಾರಿಗಳು ಹಾಗೂ ಸದಸ್ಯೆಯರು ಸಮಾಜದ ಹೆಣ್ಣು ಮಕ್ಕಳಿಗಾಗಿ ಸೆ.24 ಮತ್ತು 25ರಂದು ಮಧ್ಯಾಹ್ನ 3ರಿಂದ 5.30ರವರೆಗೆ ತರಬೇತಿ ಆಯೋಜಿಸಿದ್ದರು.

ಸೃಷ್ಟಿ ಬ್ಯೂಟಿ ಪಾರ್ಲರ್‌ನ ಹೇಮಾ ಕಾಟೀಗರ್ ಹಾಗೂ ಅಂಜಲಿ ಬ್ಯೂಟಿ ಪಾರ್ಲರ್‌ನ ಕೇಸರಿ ಬಾಕಳೆ ತರಬೇತಿ ನೀಡಿದರು. ಮೊದಲ ದಿನ ಎಂಟು ಬಗೆಯ ಸುಂದರ ಕೇಶಾಲಂಕಾರದ ವಿಧಾನಗಳನ್ನು ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿಕೊಡಲಾಯಿತು. ಎರಡನೇ ದಿನ ಮನೆಯಲ್ಲೇ ಲಭ್ಯವಿರುವ ವಸ್ತುಗಳನ್ನು ಬಳಸಿಕೊಂಡು ಮುಖ ಶೃಂಗಾರ ಮಾಡಿಕೊಳ್ಳುವ ವಿಧಾನವನ್ನು ಪರಿಚಯಿಸಲಾಯಿತು.

ಸುಮಾರು 60 ಮಹಿಳೆಯರು ತರಬೇತಿಯ ಸದುಪಯೋಗ ಪಡೆದುಕೊಂಡರು.

## ನೂತನ ಸಭಾಧ್ಯಕ್ಷ ಜಿ.ಎಸ್. ಪಾಟೀಲರಿಗೆ ಇಂದು ಅಭಿನಂದನಾ ಸಮಾರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿಧಾನಸಭೆಯ ನೂತನ ಸಭಾಧ್ಯಕ್ಷರು ಹಾಗೂ ಡಾ. ಪಂ. ಪುಟ್ಟರಾಜ ಗವಾಯಿಗಳವರ ಅಂಧರ ಶಿಕ್ಷಣ ಸಮಿತಿಯ ಕಾರ್ಯದರ್ಶಿಗಳಾದ ಜಿ.ಎಸ್. ಪಾಟೀಲ ಅವರ ಅಭಿನಂದನಾ ಸಮಾರಂಭವನ್ನು ಡಾ. ಪಂ. ಪುಟ್ಟರಾಜ ಗವಾಯಿಗಳವರ ಅಂಧರ ಶಿಕ್ಷಣ ಸಮಿತಿ ಗದಗ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ಸೆ. 29ರಂದು ಬೆಳಿಗ್ಗೆ 10.30ಕ್ಕೆ ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಹಮ್ಮಿಕೊಳ್ಳಲಾಗಿದೆ. ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು. ಗದುಗಿನ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಸಮ್ಮುಖ ವಹಿಸುವರು. ಇದೇ ಸಂದರ್ಭದಲ್ಲಿ ನೂತನ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರನ್ನು ಸನ್ಮಾನಿಸಲಾಗುವುದು.

ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಧಾರವಾಡ ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಡಾ. ಪಿಜಿಎಎಸ್ ಸಮಿತಿಯ ಉಪಾಧ್ಯಕ್ಷ ಡಾ. ಪಂ. ರಾಜಗುರು ಗುರುಸ್ವಾಮಿ ಕಲಕೇರಿ, ಸಹಕಾರ್ಯದರ್ಶಿ ಎಸ್.ಎಂ. ಗೌಡರ, ನಿರ್ದೇಶಕರಾದ ಶಿವರುದ್ರಪ್ಪ ಇಟಗಿ, ವಿ.ಬಿ. ಸೋಮನಕಟ್ಟಿಮಠ, ಗಂಗಾ ಚಕ್ರಣ್ಣವರ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ.

## ಹೆಚ್.ಎಸ್. ಕೀರ್ತನಾ ಅಧಿಕಾರ ಸ್ವೀಕಾರ

**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಶ್ರೀಮತಿ ಹೆಚ್.ಎಸ್. ಕೀರ್ತನಾ, ಭಾ.ಆ.ಸೇ. ಅವರು ಸೆ. 28ರಂದು ಅಧಿಕಾರ ವಹಿಸಿಕೊಂಡರು.

2020ನೇ ಕರ್ನಾಟಕ ಬ್ಯಾಚ್‌ನ ಭಾರತೀಯ ಆಡಳಿತ ಸೇವೆಯ ಅಧಿಕಾರಿಯಾಗಿರುವ ಹೆಚ್.ಎಸ್. ಕೀರ್ತನಾ ಅವರು ಈ ಹಿಂದೆ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು.

ಪ್ರಸ್ತುತ ಅವರು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ



## ₹2,500 ಬರಪರಿಹಾರ ಸಾಲದು, ಮೊತ್ತ ಹೆಚ್ಚಿಸಿ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸರ್ಕಾರ ನೀಡಲು ಮುಂದಾಗಿರುವ ₹2,500 ಬರಪರಿಹಾರ ಮೊತ್ತ ಅತ್ಯಂತ ಕಡಿಮೆಯಾಗಿದ್ದು, ನೈಜ ಬೆಳೆ ನಷ್ಟಕ್ಕೆ ಅನುಗುಣವಾಗಿ ಪರಿಹಾರ ಹೆಚ್ಚಿಸಬೇಕು ಎಂದು ಬಿಜೆಪಿ ಯುವ ಮುಖಂಡ ಉಮೇಶ ಚನ್ನು ಪಾಟೀಲ ಆಗ್ರಹಿಸಿದರು.

ಮಳೆಯ ಕೊರತೆ, ಬೆಳೆ ನಷ್ಟ, ಕೃಷಿ ವೆಚ್ಚ ಹೆಚ್ಚಳ, ಮೇವು ಹಾಗೂ ಕುಡಿಯುವ ನೀರಿನ ಸಮಸ್ಯೆಯಿಂದ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಹೀಗಾಗಿ ಪರಿಹಾರ ಮೊತ್ತವನ್ನು ಹೆಚ್ಚಿಸಿ, ಅರ್ಹ ರೈತರ ಖಾತೆಗಳಿಗೆ ತ್ವರಿತವಾಗಿ ಜಮೆ ಮಾಡಬೇಕು ಎಂದು ಒತ್ತಾಯಿಸಿದರು.

ಬೆಳೆ ವಿಮೆ ಮತ್ತು ಇತರ ಪರಿಹಾರ ಯೋಜನೆಗಳ ಹಣವನ್ನು ಶೀಘ್ರ ಬಿಡುಗಡೆ ಮಾಡಬೇಕು. ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಒದಗಿಸುವ ಜತೆಗೆ, ಕೃಷಿ ಸಾಲದ ಬಡ್ಡಿ ಮತ್ತು ಮರುಪಾವತಿ ಕುರಿತು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

## ಸಹಕಾರ ಮನೋಭಾವ ಬೆಳೆಸಿದರೆ ಸಮಾಜದ ಅಭಿವೃದ್ಧಿ ಸಾಧ್ಯ



ವಿಜಯಸಾಕ್ಷಿ ಸುದ್ದಿ, ಕುರ್ತಕೋಟಿ

ಸಮಾಜ ಆರ್ಥಿಕವಾಗಿ, ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಸಮುದಾಯದಲ್ಲಿ ಸಹಕಾರ ಮನೋಭಾವ ಬೆಳೆಸಿಕೊಳ್ಳುವುದು ಅಗತ್ಯ ಎಂದು ವಿಶ್ವಕರ್ಮ ಕರಕುಶಲಕರ್ಮಿಗಳ ಪತ್ತಿನ ಸಹಕಾರ ಸಂಘದ ನಿರ್ದೇಶಕ ಮೌನೇಶ ಬಡಿಗೇರ ಹೇಳಿದರು.

ಗ್ರಾಮದ ವಿಶ್ವಕರ್ಮ ಕರಕುಶಲಕರ್ಮಿಗಳ ಪತ್ತಿನ ಸಹಕಾರ ಸಂಘದ ನಾಲ್ಕನೇ ವಾರ್ಷಿಕ ಸರ್ವಸಾಧಾರಣ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಹಕಾರ ತತ್ವದಡಿ ಸ್ಥಾಪನೆಯಾದ ಸಂಘವು ಗ್ರಾಮೀಣ ಭಾಗದ ಕರಕುಶಲಕರ್ಮಿಗಳಿಗೆ ಆರ್ಥಿಕ ನೆರವು ನೀಡುವುದರ ಜತೆಗೆ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಮೆಚ್ಚುಗೆಗೆ ಪಾತ್ರವಾಗಿದೆ ಎಂದರು. ಸಮುದಾಯದ ಬಡ ಮಕ್ಕಳಿಗೆ ಹಾಗೂ ಪೌರಕಾರ್ಮಿಕರಿಗೆ ಪ್ರೋತ್ಸಾಹ ನೀಡುವ ಜತೆಗೆ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಸಂಘದಿಂದ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿ, ಕೃಷಿ ಪತ್ತಿನ ಸಹಕಾರ ಸಂಘದ ನಿವೃತ್ತ ಮುಖ್ಯ ಕಾರ್ಯನಿರ್ವಾಹಕ ಚಂದ್ರಶೇಖರಯ್ಯ ನಾಗವಿಮಠ ಮಾತನಾಡಿ, ಸಂಘದ ಪ್ರಗತಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಸಹಕಾರಿ ಸಂಘಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ಥಾಪನೆಯಾದರೆ ಸರ್ವ ಜನಾಂಗದ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಮೌನೇಶ ಬಡಿಗೇರ, ಚಂದ್ರಶೇಖರಯ್ಯ ನಾಗಾವಿಮಠ, ನಿವೃತ್ತ ಪೊಲೀಸ್ ಅಧಿಕಾರಿ ವೆಂಕರೆಡ್ಡಿ ಬಂಡಿವಾಡ ಹಾಗೂ ಕೆಇಎಸ್ ಪ್ರಾಥಮಿಕ ಶಾಲೆಯ ಪ್ರಧಾನ ಗುರು ಮಹೇಶ ಪ. ಗಾಣಿಗೇರ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸಂಘದ ಅಧ್ಯಕ್ಷ ಲಕ್ಷ್ಮಪ್ಪ ಬಡಿಗೇರ, ನಿರ್ದೇಶಕರಾದ ಗೋಪಾಲ ಮ. ಬಡಿಗೇರ, ಅಶೋಕ ಬಡಿಗೇರ, ಚಂದ್ರಶೇಖರ ಬಡಿಗೇರ, ಆನಂದ ಆದಣ್ಣಿ, ರಮೇಶ ಬಡಿಗೇರ, ನೀಲಾಂಬಿಕಾ ಬಡಿಗೇರ ಸೇರಿದಂತೆ ಸಂಘದ ಪದಾಧಿಕಾರಿಗಳು, ಗ್ರಾಮ ಪಂಚಾಯಿತಿ ಮಾಜಿ ಸದಸ್ಯರು, ಸಹಕಾರ ಸಂಘದ ನಿರ್ದೇಶಕರು, ಮುಖಂಡರು ಹಾಗೂ ಗ್ರಾಮದ ಹಿರಿಯರು ಉಪಸ್ಥಿತರಿದ್ದರು. ಮಾಲತಿ ಕುಲಕರ್ಣಿ ಪ್ರಾರ್ಥಿಸಿದರು. ಮಹೇಶ ಗಾಣಿಗೇರ ನಿರೂಪಿಸಿದರು. ಗೋಪಾಲ ಮ. ಬಡಿಗೇರ ವಂದಿಸಿದರು.

> ಸಹಕಾರ ತತ್ವದಡಿ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದರೆ ಸಮುದಾಯದ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಪ್ರಗತಿಗೆ ಬಲ ಸಿಗುತ್ತದೆ.
> – ಮೌನೇಶ ಬಡಿಗೇರ, ನಿರ್ದೇಶಕರು

## ಕ್ರೀಡೆಯಲ್ಲಿ ಚಿಂಚಲಿ ಪಿಎಂಶ್ರೀ ಶಾಲೆಯ ಸಾಧನೆ

ವಿಜಯಸಾಕ್ಷಿ ಸುದ್ದಿ, ಮುಳಗುಂದ

2026–27ನೇ ಸಾಲಿನ ತಾಲೂಕು ಮಟ್ಟದ ಪ್ರಾಥಮಿಕ ಶಾಲಾ ಕ್ರೀಡಾಕೂಟದಲ್ಲಿ ಚಿಂಚಲಿ ಪಿಎಂಶ್ರೀ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯ ಬಾಲಕಿಯರು ಉತ್ತಮ ಸಾಧನೆ ಮಾಡಿದ್ದಾರೆ.

ತ್ರೋಬಾಲ್ ಹಾಗೂ ವಾಲಿಬಾಲ್ ವಿಭಾಗಗಳಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ. ಈ ಸಾಧನೆಗೆ ಶಾಲೆಯ ಶಿಕ್ಷಕರ ವೃಂದ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ವಿದ್ಯಾರ್ಥಿನಿಯರನ್ನು ಅಭಿನಂದಿಸಿದ್ದಾರೆ.ಪ್ರಧಾನ ಗುರು ಐ.ಎಸ್. ಬಡಿಗೇರ, ದೈಹಿಕ ಶಿಕ್ಷಕ ಪಿ.ಸಿ. ಗುಜ್ಜರಿ, ಸಹಶಿಕ್ಷಕರಾದ ಎಂ.ಆರ್. ಮಳ್ಳಿ, ಬಿ.ವಿ. ಚಕ್ರಸಾಲಿ, ಎಸ್.ಎಂ. ಬಿನ್ನಾಳ, ವಾಯ್.ಸಿ. ಶಿಗ್ಗಾವಿ, ಎಸ್.ಆರ್. ಗುಡಿ, ಭುವನೇಶ್ವರಿ.ಸಿ, ಎಸ್.ಆರ್. ಪೂಜಾರ, ಶಮಷಾದ್‌ಬೇಗಂ ಕನಕಂಬಲಿ, ದಾವಲಬಿ ಮುಂದಿಲಮನಿ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ಇದ್ದರು.

## ಶರಣ ಹೂಗಾರ ಮಾದಯ್ಯ ಜಯಂತಿ ಆಚರಣೆ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪೇಟೆ ಬಸವೇಶ್ವರ ದೇವಸ್ಥಾನದಲ್ಲಿ ತಾಲೂಕು ಹೂಗಾರ ಸಮಾಜದ ವತಿಯಿಂದ ಶರಣ ಹೂಗಾರ ಮಾದಯ್ಯನವರ ಜಯಂತಿಯನ್ನು ಶನಿವಾರ ಆಚರಿಸಲಾಯಿತು. ಮಾದಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಮಾಜದ ಹಿರಿಯ ಮುಖಂಡರಾದ ಚನ್ನವೀರಪ್ಪ ಹೂಗಾರ, ವಿರುಪಾಕ್ಷಪ್ಪ ಪೂಜಾರ ಹಾಗೂ ಕಾವ್ಯ ಹೂಗಾರ ಮಾತನಾಡಿ, ಕಾಯಕ ತತ್ವದ ಮೂಲಕ ಬಸವಣ್ಣನವರ ಮನಸ್ಸು ಗೆದ್ದ ಶರಣ ಹೂಗಾರ ಮಾದಯ್ಯ ಅವರು ಆದರ್ಶ ಸಮಾಜದ ನಿರ್ಮಾಣಕ್ಕೆ ದಾರಿ ತೋರಿದವರು. ಬಸವಾದಿ ಶರಣರ ಮನೆಗಳಿಗೆ ಹೂವು ಹಾಗೂ ಪತ್ರೆ ತಲುಪಿಸುವ ಕಾಯಕವನ್ನು ಮಾಡುತ್ತಿದ್ದರು. ತಮ್ಮ ಕಾಯಕ ಹಾಗೂ ವಚನಗಳ ಮೂಲಕ ಜನಮಾನಸದಲ್ಲಿ ಸದಾ ಸ್ಮರಣೀಯರಾಗಿದ್ದಾರೆ ಎಂದರು. ಹೂಗಾರ ಸಮುದಾಯ ಆರ್ಥಿಕವಾಗಿ ಹಿಂದುಳಿದಿದ್ದು, ಸಮಾಜದ ಅಭಿವೃದ್ಧಿಗೆ ಸರ್ಕಾರದಿಂದ ಸೂಕ್ತ ಸೌಲಭ್ಯ ಹಾಗೂ ಅಗತ್ಯ ಸವಲತ್ತುಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಶೇಖರ್ ಹೂವಿನ ವಹಿಸಿದ್ದರು. ಚಂದ್ರಶೇಖರ್ ಹೂವಿನ, ಡಾ. ಶಿವಾನಂದ ಹೂವಿನ, ಫಕೀರಪ್ಪ ಹೂಗಾರ, ಜಿ.ಎಸ್. ಹೂಗಾರ, ಈರಪ್ಪ ಹೂಗಾರ, ಶ್ರೀಕಾಂತ ಹೂಗಾರ, ವಿರುಪಾಕ್ಷಪ್ಪ ಪೂಜಾರ, ಚಂದ್ರಶೇಖರ ಪೂಜಾರ, ಪರಶುರಾಮ ಹೂಗಾರ, ಅನ್ನಪೂರ್ಣ ಹೂವಿನ, ಜಯಶ್ರೀ ಹೂಗಾರ, ಮಂಜುಳಾ ಹೂಗಾರ, ರಾಜು ಹೂಗಾರ, ಮಹಾದೇವಪ್ಪ ಹೂಗಾರ, ಚಿದಾನಂದ ಪೂಜಾರ, ಆರ್.ಎಸ್. ಕೇಸರಳ್ಳಿ ಸೇರಿದಂತೆ ಸಮಾಜದ ಮುಖಂಡರು, ಮಕ್ಕಳು ಉಪಸ್ಥಿತರಿದ್ದರು.

### 1937ರ ಕಾಂಗ್ರೆಸ್ ನಿರ್ಣಯದ ಹಿನ್ನೆಲೆ ತಿಳಿಯಲಿ: ಅಶೋಕ ಮಂದಾಲಿ

# ‘ವಂದೇ ಮಾತರಂ’ ನಿರ್ಧಾರದ ಹಿಂದೆ ರಾಷ್ಟ್ರೀಯ ಒಗ್ಗಟ್ಟು

ವಿಜಯಸಾಕ್ಷಿ ಸುದ್ದಿ, ಗದಗ

‘ವಂದೇ ಮಾತರಂ’ ಗೀತೆಯ ಕುರಿತು ಬಿಜೆಪಿ ಮಾಡುತ್ತಿರುವ ಆರೋಪಗಳಿಗೆ 1937ರ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ನಿರ್ಣಯವೇ ಐತಿಹಾಸಿಕ ಉತ್ತರವಾಗಿದ್ದು, ಇದರ ಹಿನ್ನೆಲೆಯನ್ನು ತಿಳಿದುಕೊಳ್ಳಬೇಕು ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, 1937ರಲ್ಲಿ ‘ವಂದೇ ಮಾತರಂ’ನ ಕೆಲವು ಚರಣಗಳ ಧಾರ್ಮಿಕ ರೂಪಕಗಳ ಕುರಿತು ಚರ್ಚೆ ನಡೆದ ಹಿನ್ನೆಲೆಯಲ್ಲಿ ರಾಷ್ಟ್ರೀಯ ಚಳವಳಿಯಲ್ಲಿ ಎಲ್ಲ ಸಮುದಾಯಗಳ ಒಗ್ಗಟ್ಟು ಕಾಪಾ ಡುವ ಉದ್ದೇಶದಿಂದ ಮೊದಲ ಎರಡು ಚರಣಗಳನ್ನು ರಾಷ್ಟ್ರೀಯ ಸಭೆಗಳಲ್ಲಿ ಹಾಡಲು ನಿರ್ಧರಿಸಲಾಗಿತ್ತು ಎಂದು ಹೇಳಿದ್ದಾರೆ. ಜವಾಹರಲಾಲ್ ನೆಹರೂ ಅವರು ಅಕ್ಟೋಬರ್ 20, 1937ರಂದು ಸುಭಾಷ್ ಚಂದ್ರ ಬೋಸ್ ಅವರಿಗೆ ಬರೆದ ಪತ್ರದಲ್ಲಿ ಬೋಸ್ ಅವರ ಸಲಹೆಯಂತೆ ರವೀಂದ್ರನಾಥ ಟ್ಯಾಗೋರ್ ಅವರೊಂದಿಗೆ ಈ ವಿಚಾರ ಚರ್ಚಿಸುವುದಾಗಿ ಉಲ್ಲೇಖಿಸಿದ್ದರು. ಅಕ್ಟೋಬರ್ 1937ರಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯ ನಿರ್ಧಾರವು ‘ವಂದೇ ಮಾತರಂ’ನ ಮೊದಲ ಎರಡು ಚರಣಗಳಿಗೆ ರಾಷ್ಟ್ರೀಯ ಚಳವಳಿ ಯಲ್ಲಿ ಇದ್ದ ಮಹತ್ವವನ್ನು ಒಪ್ಪಿಕೊಂಡಿತ್ತು. ಉಳಿದ ಭಾಗಗಳಲ್ಲಿನ ರೂಪಕಗಳು ಕೆಲವು ಸಮುದಾಯಗಳಿಗೆ ಆಕ್ಷೇಪಾರ್ಹವಾಗಬಹುದೆಂಬ ಕಾರಣದಿಂದ ರಾಷ್ಟ್ರೀಯ ಸಮಾವೇಶಗಳಲ್ಲಿ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಲು ಶಿಫಾರಸು ಮಾಡಲಾಗಿತ್ತು ಎಂದು ನೆಹರೂ ಅವರ ದಾಖಲೆಗಳು ತಿಳಿಸುತ್ತವೆ.

ವಂದೇ ಮಾತರಂ ಕುರಿತು ಚರ್ಚಿಸುವಾಗ 1937ರ ನಿರ್ಣಯದ ಸಂಪೂರ್ಣ ಹಿನ್ನೆಲೆಯನ್ನು ಅರಿತುಕೊಳ್ಳಬೇಕು. ರಾಷ್ಟ್ರೀಯ ಚಳವಳಿಯ ಸಂದರ್ಭದಲ್ಲಿ ಎಲ್ಲರನ್ನೂ ಒಳಗೊಂಡ ಒಗ್ಗಟ್ಟನ್ನು ಕಾಪಾಡುವ ದೃಷ್ಟಿಯಿಂದ ತೆಗೆದುಕೊಂಡ ನಿರ್ಧಾರವನ್ನು ಇಂದಿನ ರಾಜಕೀಯ ವಾದಗಳಿಗಾಗಿ ಬೇರೆ ರೀತಿ ಯಲ್ಲಿ ಬಿಂಬಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಸ್ವಾತಂತ್ರ್ಯ ಚಳವಳಿಯ ಪ್ರಮುಖ ನಾಯಕರಾದ ಸುಭಾಷ್ ಚಂದ್ರ ಬೋಸ್, ಜವಾಹರಲಾಲ್ ನೆಹರೂ ಸೇರಿದಂತೆ ಹಲವು ನಾಯಕರ ನಡುವೆ ಈ ಕುರಿತು ಚರ್ಚೆ ನಡೆದಿರುವುದು ಐತಿಹಾಸಿಕ ದಾಖ ಲೆಗಳಿಂದ ಸ್ಪಷ್ಟವಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

> 1937ರ ಸಿಡಬ್ಲ್ಯೂಸಿ ನಿರ್ಣಯದ ಸಂಪೂರ್ಣ ಹಿನ್ನೆಲೆಯನ್ನು ತಿಳಿದುಕೊಂಡು ‘ವಂದೇ ಮಾತರಂ’ ಕುರಿತು ಚರ್ಚಿಸಬೇಕು. ರಾಷ್ಟ್ರೀಯ ಒಗ್ಗಟ್ಟಿನ ದೃಷ್ಟಿಯಿಂದ ಕೈಗೊಂಡ ಐತಿಹಾಸಿಕ ನಿರ್ಧಾರವನ್ನು ರಾಜಕೀಯ ವಿವಾದದ ರೂಪದಲ್ಲಿ ನೋಡುವುದು ಸರಿಯಲ್ಲ.
> – ಅಶೋಕ ಮಂದಾಲಿ, ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ

## ರಾಜ್ಯ ದೇವಾಂಗ ಸಂಘಕ್ಕೆ ಪ್ರತಿನಿಧಿಗಳಾಗಿ ರಾಘವೇಂದ್ರ–ಅಶೋಕ ಆಯ್ಕೆ





ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ದೇವಾಂಗ ಸಂಘದ ರಾಜ್ಯ ಪ್ರತಿನಿಧಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಗದಗ ಜಿಲ್ಲೆಯಿಂದ ರಾಘವೇಂದ್ರ ಬಸವರಾಜ ಯಳವತ್ತಿ ಹಾಗೂ ಅಶೋಕ ಗುರುನಾಥಪ್ಪ ಹೊನ್ನಳ್ಳಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ರಾಜ್ಯ ಸಂಘದ ಚುನಾವಣಾ ವೇಳಾಪಟ್ಟಿಯಂತೆ ಗದಗ ಜಿಲ್ಲೆಗೆ ನಿಗದಿಪಡಿಸಲಾಗಿದ್ದ ಎರಡು ಪ್ರತಿನಿಧಿ ಸ್ಥಾನಗಳಿಗೆ ಇಬ್ಬರೇ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರಗಳ ಪರಿಶೀಲನೆ ಬಳಿಕ ಎರಡೂ ನಾಮಪತ್ರಗಳು ಕ್ರಮಬದ್ಧವಾಗಿರುವುದು ದೃಢಪಟ್ಟ ಹಿನ್ನೆಲೆಯಲ್ಲಿ ಇಬ್ಬರನ್ನೂ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಲಾಯಿತು.

ಗದಗ–ಬೆಟಗೇರಿ ಹಳೆ ಬನಶಂಕರಿ ದೇವಸ್ಥಾನದ ಆವರಣದಲ್ಲಿ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಕರ್ನಾಟಕ ರಾಜ್ಯ ದೇವಾಂಗ ಸಂಘದ ಚುನಾವಣಾಧಿಕಾರಿ ದಶರಥರಾಜ ಗಂಗಾಧರಪ್ಪ ಕೊಳ್ಳಿ ಅವರು ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಎರಡು ಸ್ಥಾನಗಳಿಗೆ ಇಬ್ಬರೇ ಅಭ್ಯರ್ಥಿಗಳಿದ್ದ ಕಾರಣ ಮತದಾನ ನಡೆಯಲಿಲ್ಲ. ಈ ಮೂಲಕ ರಾಘವೇಂದ್ರ ಬಸವರಾಜ ಯಳವತ್ತಿ ಹಾಗೂ ಅಶೋಕ ಗುರುನಾಥಪ್ಪ ಹೊನ್ನಳ್ಳಿ ಅವರು ರಾಜ್ಯ ದೇವಾಂಗ ಸಂಘದಲ್ಲಿ ಗದಗ ಜಿಲ್ಲೆಯನ್ನು ಪ್ರತಿನಿಧಿಸಲಿದ್ದಾರೆ.

ಅವಿರೋಧವಾಗಿ ಆಯ್ಕೆಯಾದ ಇಬ್ಬರು ಪ್ರತಿನಿಧಿಗಳಿಗೆ ದೇವಾಂಗ ಸಮಾಜದ ಮುಖಂಡರು ಹಾಗೂ ಸಂಘದ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದರು

## ದಸರಾ ಮಹೋತ್ಸವಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ













ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಡವೀಂದ್ರಸ್ವಾಮಿ ಮಠದಲ್ಲಿ 2026ನೇ ಸಾಲಿನ ದಸರಾ ಮಹೋತ್ಸವವನ್ನು ಆಯೋಜಿಸುವ ಕುರಿತು ನಡೆದ ಭಕ್ತರ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಸದಾಶಿವಯ್ಯ ಮದರಿಮಠ ಗೌರವಾಧ್ಯಕ್ಷರಾಗಿ, ಸಂತೋಷ ಮಹೇಶಚಂದ್ರ ಕಬಾಡರ ಅಧ್ಯಕ್ಷರಾಗಿ, ಶಿವಪ್ರಭು ನೀಲಗುಂದ ಕಾರ್ಯದರ್ಶಿಯಾಗಿ ಹಾಗೂ ಪ್ರಭುಗೌಡ ಪಾಟೀಲ ಕೋಶಾಧ್ಯಕ್ಷರಾಗಿ ಆಯ್ಕೆಯಾದರು. ಮಹಿಳಾ ವಿಭಾಗದ ಅಧ್ಯಕ್ಷರಾಗಿ ಶಿವಲೀಲಾ ಅಕ್ಕಿ ಹಾಗೂ ಕಾರ್ಯದರ್ಶಿಯಾಗಿ ಅಶ್ವಿನಿ ನೀಲಗುಂದ ಆಯ್ಕೆಯಾಗಿದ್ದಾರೆ.

ನಿರ್ದೇಶಕ ಮಂಡಳಿಗೆ ಬಿ.ಎಂ. ಬಿಳೆಯಲಿ, ಎಲ್.ಎಸ್. ನೀಲಗುಂದ, ಪ್ರೊ. ಕೆ.ಎಚ್. ಬೇಲೂರ, ಜಿ.ಎಂ. ಯಾನಮಶೆಟ್ಟಿ, ನಿಂಗಪ್ಪ ಬಳಿಗಾರ, ಪ್ರಕಾಶ ಅಕ್ಕಿ, ಎಸ್.ಎಸ್. ಪಾಟೀಲ, ಎನ್. ಕೆ. ನಾಲ್ವತ್ತವಾಡಮಠ, ಬಿ.ಬಿ. ಸಂಕನೂರ, ಪಿ.ಸಿ. ಪುರಾಣಿಕಮಠ, ಪ್ರಕಾಶ ಬಂಡಿ, ಸಿದ್ದಣ್ಣ ಜವಳಿ, ಮಾರುತಿ ಹೆಬ್ಬಾರ, ಬಸವರಾಜ ಬ್ಯಾಹಟ್ಟಿ, ಪ್ರಭುಗೌಡ ಪಾಟೀಲ ಹಾಗೂ ಪ್ರವೀಣ ವಾರಕರ ಆಯ್ಕೆಯಾಗಿದ್ದಾರೆ.

ಮಹಿಳಾ ನಿರ್ದೇಶಕ ಮಂಡಳಿಗೆ ಸುಶೀಲಾ ಕೋಟಿ, ಗೌರಾದೇವಿ ಶಾಬಾದಿಮಠ, ಪ್ರಮಿಳಾದೇವಿ ಬಳಿಗಾರ, ಜಯಶ್ರೀ ಉಗಲಾಟದ, ಸುವರ್ಣ ಶಿವನಗೌಡರ, ಜ್ಯೋತಿ ದಾನಪ್ಪಗೌಡರ, ಶಿವಲೀಲಾ ಕುರಡಗಿ, ಸುವರ್ಣ ವಸ್ತ್ರದ, ಜಯಶ್ರೀ ವಸ್ತ್ರದ, ಗೀತಾಬಾಯಿ ಮುಲ್ಜಿ, ವೀಣಾ ಕಾವೇರಿ, ಅನ್ನಪೂರ್ಣ ಕಬಾಡರ, ಅಮೃತಾ ವಾರಕರ ಹಾಗೂ ವೇದಾ ಬಿದರೂರ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳ ನೇತೃತ್ವದಲ್ಲಿ ದಸರಾ ಮಹೋತ್ಸವವನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

## ಹಾಸ್ಯದೊಳಗೇ ಸಮಾಜದ ವೈರುಧ್ಯ ಬಿಂಬಿಸಿದ ಬೀಚಿ



ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕನ್ನಡ ಸಾಹಿತ್ಯದಲ್ಲಿ ಹಾಸ್ಯ, ವ್ಯಂಗ್ಯ ಹಾಗೂ ಸಮಾಜಮುಖಿ ಚಿಂತನೆಯ ಮೂಲಕ ವಿಶಿಷ್ಟ ಛಾಪು ಮೂಡಿಸಿದ ಬೀಚಿಂಯವರ ಸಾಹಿತ್ಯ ಓದುಗರನ್ನು ನಗಿಸುವುದರ ಜತೆಗೆ ಸಮಾಜದ ವೈರುಧ್ಯಗಳು ಹಾಗೂ ಅಂಕುಡೊಂಕುಗಳ ಕುರಿತು ಚಿಂತಿಸುವಂತೆ ಮಾಡುತ್ತದೆ ಎಂದು ಅಬ್ಬಿಗೇರಿ ಕಲಾಕಾಶಿ ಸಂಸ್ಥಾಪಕ ಉಪನ್ಯಾಸಕ ಡಾ. ಡಿ.ಎ. ಉಪಾಧ್ಯ ಹೇಳಿದರು.

ಅಬ್ಬಿಗೇರಿಯ ಶ್ರೀ ಸದ್ಗುರು ಯಲ್ಲಾಲಿಂಗೇಶ್ವರ ಮಠದಲ್ಲಿ ಶನಿವಾರ ನಡೆದ ಬೀಚಿ ಬಳಗದ ಮಾಸಿಕ ಸಭೆಯಲ್ಲಿ ‘ಬೀಚಿಂಯವರ ಜೀವನ ಮತ್ತು ಸಾಹಿತ್ಯ’ ವಿಷಯ ಕುರಿತು ಉಪನ್ಯಾಸ ನೀಡಿದ ಅವರು, ಬೀಚಿಯವರ ಮೂಲ ಹೆಸರು ರಾಯಸಂ ಭೀಮರಾವ್. ಕಾದಂಬರಿ, ಹಾಸ್ಯ ಸಾಹಿತ್ಯ, ನಾಟಕ ಹಾಗೂ ಲೇಖನ ಸೇರಿದಂತೆ ವಿವಿಧ ಪ್ರಕಾರಗಳಲ್ಲಿ ಅವರು ಮಹತ್ವದ ಕೃತಿಗಳನ್ನು ರಚಿಸಿದ್ದಾರೆ ಎಂದರು.

ಸಮಾಜದ ನ್ಯೂನತೆಗಳನ್ನು ಗುರುತಿಸಿ, ಅವುಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಶಕ್ತಿ ಸಾಹಿತ್ಯಕ್ಕಿದೆ. ಸಾಹಿತ್ಯದ ರೂಪ ಬದಲಾಗಬಹುದು. ಆದರೆ ಅದರ ಮೂಲ ಆಶಯ ಸಮಾಜದ ಒಳಿತಾಗಿರಬೇಕು ಎಂದು ಹೇಳಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಬಸವರಾಜ ಶರಣರು ಮಾತನಾಡಿ, ಬೀಚಿಯವರ ಬದುಕು, ಸಾಹಿತ್ಯ ಹಾಗೂ ಸಾಮಾಜಿಕ ಕಳಕಳಿಯನ್ನು ಇಂದಿನ ಪೀಳಿಗೆ ಅರಿಯಬೇಕಿದೆ ಎಂದರು. ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಮಾತನಾಡಿ, ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಸಾಹಿತ್ಯದ ಮೂಲಕ ಜ್ಞಾನ ಹಾಗೂ ಚಿಂತನೆಯ ವಿಸ್ತಾರ ಸಾಧ್ಯ ಎಂದು ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಬೀಚಿಯವರ ಸಾಹಿತ್ಯದ ವೈಶಿಷ್ಟ್ಯವನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಣಾಧಿಕಾರಿ ಕಾಶಿನಾಥ ಸಾಲಿಮಠ, ಪ್ರಾಚಾರ್ಯ ಶಿವಾನಂದ ಗೋಗೇರಿ, ನಿವೃತ್ತ ಪ್ರಾಂಶುಪಾಲ ಡಿ.ಎ. ಅರವಟಿಗಿಮಠ, ಶಿಕ್ಷಕ ಮಹಾದೇವಪ್ಪ ಬೇವಿನಕಟ್ಟಿ ಸೇರಿದಂತೆ ಬೀಚಿ ಬಳಗದ ಪದಾಧಿಕಾರಿಗಳು, ಸದಸ್ಯರು ಹಾಗೂ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಿದ್ದರು. ಬಸವರಾಜ ಕುರಿ ಡಾ. ಡಿ.ಎ. ಉಪಾಧ್ಯ ಅವರನ್ನು ಪರಿಚಯಿಸಿದರು. ಕಾರ್ಯಕ್ರಮದಲ್ಲಿ ನಾಡಗೀತೆ ಗಾಯನದೊಂದಿಗೆ ಕಾರ್ಯಕ್ರಮ ಆರಂಭವಾಯಿತು.

### ಸಮತೋಲಿತ ಆಹಾರ, ಯೋಗದಿಂದ ಆರೋಗ್ಯ ಕಾಪಾಡಿಕೊಳ್ಳಿ

# ಬದಲಾದ ಜೀವನಶೈಲಿಯೇ ಅನಾರೋಗ್ಯಕ್ಕೆ ಕಾರಣ



> ಆಹಾರ ಪದ್ಧತಿ, ಯೋಗ, ಧ್ಯಾನ ಹಾಗೂ ವ್ಯಾಯಾಮವನ್ನು ಜೀವನಶೈಲಿಯ ಭಾಗವಾಗಿಸಿಕೊಂಡರೆ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಋತುಮಾನಕ್ಕೆ ತಕ್ಕಂತೆ ಸಮತೋಲಿತ ಆಹಾರ ಸೇವಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು.”
> – ಡಾ. ಜಿ.ಎಸ್. ಹಿರೇಮಠ, ಆಯುರ್ವೇದ ತಜ್ಞ

ವಿಜಯಸಾಕ್ಷಿ ಸುದ್ದಿ, ಗದಗ

ಬದಲಾದ ಜೀವನಶೈಲಿಯಿಂದ ಇಂದು ಹಲವು ಆರೋಗ್ಯ ಸಮಸ್ಯೆಗಳು ಎದುರಾಗುತ್ತಿದ್ದು, ಆಹಾರ ಮತ್ತು ಆರೋಗ್ಯಕ್ಕೆ ನೇರ ಸಂಬಂಧವಿರುವುದರಿಂದ ಸಮತೋಲಿತ ಹಾಗೂ ಋತುಮಾನಕ್ಕೆ ಅನುಗುಣವಾದ ಆಹಾರ ಪದ್ಧತಿ ರೂಢಿಸಿಕೊಳ್ಳಬೇಕು ಎಂದು ಆಯುರ್ವೇದ ತಜ್ಞ ಡಾ. ಜಿ.ಎಸ್. ಹಿರೇಮಠ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ಡಾ. ಶರಣಬಸಪ್ಪ ಕಳಕಪ್ಪ ಪಲ್ಲೇದ ಸ್ಮರಣಾರ್ಥ ದತ್ತಿ ಉಪನ್ಯಾಸದಲ್ಲಿ ಮಾತನಾಡಿದ ಅವರು, ವಾತ, ಪಿತ್ತ ಹಾಗೂ ಕಫಗಳ ಸಮತೋಲನ ಕಾಪಾಡಿಕೊಳ್ಳುವುದು ಆರೋಗ್ಯದ ದೃಷ್ಟಿಯಿಂದ ಮುಖ್ಯ. ಯೋಗ, ಧ್ಯಾನ ಮತ್ತು ವ್ಯಾಯಾಮದ ಮೂಲಕ ದೈಹಿಕ ಹಾಗೂ ಮಾನಸಿಕ ಸದೃಢತೆ ಕಾಪಾಡಿಕೊಳ್ಳಬೇಕು ಎಂದರು. ಆಹಾರ ಪ್ರಸಾದವಾದಾಗ ಅದೇ ಔಷಧಿಯಾಗುತ್ತದೆ. ಇಂದಿನ ಕಲಬೆರಕೆಯ ದಿನಮಾನದಲ್ಲಿ ಪ್ರಜ್ಞಾಪರಾಧ ಮಾಡದೆ ಪ್ರಾಚೀನ ಆರೋಗ್ಯ ಪದ್ಧತಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯೋಗಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ದೀರ್ಘಾಯುಷ್ಯಕ್ಕೆ ಯೋಗ ಸಹಕಾರಿ. ಪೋಷಕರು ಬಾಲ್ಯದಿಂದಲೇ ಮಕ್ಕಳಲ್ಲಿ ಉತ್ತಮ ಆಹಾರ ಪದ್ಧತಿ ಹಾಗೂ ಆರೋಗ್ಯಕರ ಜೀವನಶೈಲಿಯ ಅಭ್ಯಾಸ ಬೆಳೆಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಆರೋಗ್ಯ ಶಿಕ್ಷಣ ಕಲಿಕೆಯ ಪ್ರಮುಖ ಭಾಗವಾಗಬೇಕು. ಹಬ್ಬಗಳಲ್ಲಿನ ಆಹಾರ ಪದ್ಧತಿಗೂ ಋತುಮಾನ ಹಾಗೂ ಆರೋಗ್ಯದ ವೈಜ್ಞಾನಿಕ ಹಿನ್ನೆಲೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮೈಸೂರಿನ ವಿವೇಕಾನಂದ ಯೋಗ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯಿಂದ ರಾಜಯೋಗಿ ಟಿ. ಕೃಷ್ಣಮಾಚಾರಿ ಪ್ರಶಸ್ತಿ ಪಡೆದ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಅವರನ್ನು ಸನ್ಮಾನಿಸಲಾಯಿತು.

ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ ಡಾ. ಶರಣಬಸಪ್ಪ ಪಲ್ಲೇದ ಅವರ ಕುರಿತು ಮಾತನಾಡಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ರಾಹುಲ ಗಿಡ್ನಂದಿ ಸ್ವಾಗತಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ಹಲವು ಗಣ್ಯರು ಹಾಗೂ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

### ಗಲೀಜು ನೀರಿನಿಂದ ದುರ್ನಾತ: ಗಣೇಶ ಸಿಂಗ್ ಬ್ಯಾಳಿ ಆರೋಪ

# ಗಬ್ಬು ನಾರುತ್ತಿರುವ ಕಿತ್ತೂರು ಚನ್ನಮ್ಮ ಉದ್ಯಾನವನ



> ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಉದ್ಯಾನವನದಲ್ಲಿನ ಗಲೀಜು ನೀರು ಹಾಗೂ ಸ್ವಚ್ಛತೆಯ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು. ಹೋರಾಟಕ್ಕೆ ಅವಕಾಶ ನೀಡದೆ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು.
> – ಗಣೇಶಸಿಂಗ್ ಬ್ಯಾಳಿ, ಅಧ್ಯಕ್ಷರು, ಬೆಟಗೇರಿ ರೈಲ್ವೆ ಹೋರಾಟ ಸಮಿತಿ

ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬಹುವರ್ಷಗಳ ಇತಿಹಾಸ ಹೊಂದಿರುವ ಬೆಟಗೇರಿಯ ಪಿ.ಬಿ. ರಸ್ತೆಯಲ್ಲಿರುವ ಕಿತ್ತೂರು ಚನ್ನಮ್ಮ ಉದ್ಯಾನವನ ಗಲೀಜು ನೀರು ಹಾಗೂ ಸ್ವಚ್ಛತೆಯ ಕೊರತೆಯಿಂದ ದುರ್ವಾಸನೆ ಬೀರುತ್ತಿದ್ದು, ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಬೆಟಗೇರಿ ರೈಲ್ವೆ ಹೋರಾಟ ಸಮಿತಿ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ಆರೋಪಿಸಿದ್ದಾರೆ.

ಉದ್ಯಾನವನಕ್ಕೆ ಹೊಂದಿಕೊಂಡಿರುವ ನಾಲಾದ ಗಲೀಜು ನೀರು ಜಿಮ್ ಇರುವ ಭಾಗದಲ್ಲಿ ಹರಿದು ಬಂದು ನಿಂತುಕೊಳ್ಳುತ್ತಿದೆ. ಇದರಿಂದ ಸುತ್ತಮುತ್ತ ದುರ್ನಾತ ಆವರಿಸಿದೆ.

ಇದೇ ಭಾಗದಲ್ಲಿರುವ ಸಾರ್ವಜನಿಕ ಗ್ರಂಥಾಲಯಕ್ಕೆ ಪ್ರತಿನಿತ್ಯ ಪತ್ರಿಕೆ ಓದಲು ಬರುವ ನಾಗರಿಕರು ದುರ್ವಾಸನೆಯಿಂದಾಗಿ ಅಲ್ಲಿಯೇ ಕುಳಿತುಕೊಳ್ಳಲಾಗದೆ ಹಿಂದಿರುಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ತಿಳಿಸಿದ್ದಾರೆ.

ಉದ್ಯಾನವನದಲ್ಲಿಯೂ ಸಮರ್ಪಕ ಸ್ವಚ್ಛತೆ ಹಾಗೂ ನಿರ್ವಹಣೆ ಇಲ್ಲದ ಕಾರಣ ವಾಯುವಿಹಾರಕ್ಕೆ ಬರುವ ಸಾರ್ವಜನಿಕರು ಮೂಗು ಮುಚ್ಚಿಕೊಂಡು ಓಡಾಡುವಂತಾಗಿದೆ.

ಈ ಕುರಿತು ನಗರಸಭೆ ಆಡಳಿತಾಧಿಕಾರಿ, ಜಿಲ್ಲಾಧಿಕಾರಿ ಹಾಗೂ ಆಯುಕ್ತರಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಸಮಸ್ಯೆ ಬಗೆಹರಿದಿಲ್ಲ ಎಂದು ಗಣೇಶಸಿಂಗ್ ಬ್ಯಾಳಿ ದೂರಿದ್ದಾರೆ.

ಅ.5ರೊಳಗೆ ಸಮಸ್ಯೆ ಪರಿಹರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

### ಪ್ರವಾಸಿ ತಾಣಗಳ ಸ್ವಚ್ಛತೆ, ಭದ್ರತೆಗೆ ಆದ್ಯತೆ ನೀಡಿ: ಮುಕುಲ್ ಜೈನ್

# ವಿದ್ಯಾರ್ಥಿಗಳು ಪ್ರವಾಸೋದ್ಯಮದ ರಾಯಭಾರಿಗಳಾಗಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪ್ರವಾಸೋದ್ಯಮದ ದೃಷ್ಟಿಯಿಂದ ಅತ್ಯಂತ ಶ್ರೀಮಂತ ಹಾಗೂ ಐತಿಹಾಸಿಕ ಹಿನ್ನೆಲೆಯುಳ್ಳ ರಾಜ್ಯವಾಗಿದೆ. ಗದಗ ಜಿಲ್ಲೆಯಲ್ಲಿಯೂ ತ್ರಿಕೂಟೇಶ್ವರ ದೇವಾಲಯ, ಲಕ್ಕುಂಡಿ ಸೇರಿದಂತೆ ಹಲವು ಪ್ರಮುಖ ಐತಿಹಾಸಿಕ ಹಾಗೂ ಪ್ರಾಕೃತಿಕ ಪ್ರವಾಸಿ ತಾಣಗಳಿವೆ. ಈ ತಾಣಗಳ ಸಂಪೂರ್ಣ ಸಾಮರ್ಥ್ಯವನ್ನು ಸದುಪಯೋಗಪಡಿಸಿಕೊಳ್ಳಲು ಸ್ವಚ್ಛತೆ, ಪ್ರವಾಸಿಗರ ಸುರಕ್ಷತೆ ಹಾಗೂ ಭದ್ರತೆಗೆ ಆದ್ಯತೆ ನೀಡುವುದರ ಜೊತೆಗೆ ಪ್ರಾಕೃತಿಕ ಮತ್ತು ಐತಿಹಾಸಿಕ ತಾಣಗಳ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಒ ಮುಕುಲ್ ಜೈನ್ ಹೇಳಿದರು.

ನಗರದ ಶ್ರೀ ಬಸವೇಶ್ವರ ಮೂರ್ತಿಯ ಉದ್ಯಾನವನ ಭೀಷ್ಮ ಕೆರೆಯ ವಿಹಾರಧಾಮದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಎನ್‌ಎಸ್‌ಎಸ್ ಘಟಕದ ಸಹಯೋಗದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ-2026ರ ಅಂಗವಾಗಿ ಆಯೋಜಿಸಿದ್ದ ಡಿಜಿಟಲ್ ಕಾರ್ಯಸೂಚಿ ಹಾಗೂ ಕೃತಕ ಬುದ್ಧಿಮತ್ತೆ ಬಳಸಿ ಪ್ರವಾಸೋದ್ಯಮ ಮರುಸೃಷ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಪ್ರವಾಸೋದ್ಯಮ ಕೇವಲ ಮನರಂಜನೆಗೆ ಸೀಮಿತವಲ್ಲ. ದೇಶದ ಸಂಸ್ಕೃತಿ ಸಂರಕ್ಷಣೆ ಹಾಗೂ ಆರ್ಥಿಕ ಪ್ರಗತಿಗೂ ಪ್ರವಾಸೋದ್ಯಮ ಪ್ರಮುಖ ಬೆನ್ನೆಲುಬಾಗಿದೆ. ಪ್ರವಾಸಿಗರಿಗೆ ಉತ್ತಮ ಮೂಲಸೌಕರ್ಯ, ಆತಿಥ್ಯ ಹಾಗೂ ಭದ್ರತೆ ಒದಗಿಸುವುದರಿಂದ ಸ್ಥಳೀಯವಾಗಿ ಆತಿಥ್ಯ ಉದ್ಯಮ ಬೆಳೆಯುವುದರ ಜೊತೆಗೆ ಉದ್ಯೋಗಾವಕಾಶಗಳೂ ಸೃಷ್ಟಿಯಾಗುತ್ತವೆ ಎಂದರು.

ಸಿಂಗಾಪುರ, ದುಬೈ, ಶ್ರೀಲಂಕಾ ಸೇರಿದಂತೆ ಹಲವು ದೇಶಗಳು ಪ್ರವಾಸೋದ್ಯಮದ ಮೂಲಕ ತಮ್ಮ ಆರ್ಥಿಕತೆಯನ್ನು ಬಲಪಡಿಸಿಕೊಂಡಿವೆ. ದೇಶದ ಆರ್ಥಿಕತೆಯಲ್ಲಿ ಪ್ರವಾಸೋದ್ಯಮದ ಕೊಡುಗೆಯ ಮಹತ್ವವನ್ನು ಅರಿತುಕೊಂಡು ಪ್ರವಾಸಿ ತಾಣಗಳ ಅಭಿವೃದ್ಧಿ ಹಾಗೂ ಮೂಲಸೌಕರ್ಯ ಸುಧಾರಣೆಗೆ ಒತ್ತು ನೀಡಬೇಕು ಎಂದು ಹೇಳಿದರು.

ಗದಗ ಜಿಲ್ಲೆಯ ಹೆಮ್ಮೆಯ ಪ್ರವಾಸಿ ಹಾಗೂ ಪ್ರಾಕೃತಿಕ ತಾಣವಾದ ಕಪ್ಪತಗುಡ್ಡದಲ್ಲಿ 340ಕ್ಕೂ ಹೆಚ್ಚು ವಿವಿಧ ಔಷಧೀಯ ಸಸ್ಯಗಳಿದ್ದು, ಇದು ನಾಡಿನ ಅಪರೂಪದ ನೈಸರ್ಗಿಕ ಸಂಪತ್ತಾಗಿದೆ. ಇಂತಹ ನೈಸರ್ಗಿಕ ಸಂಪತ್ತನ್ನು ಸಂರಕ್ಷಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

'ದೇಶ ಸುತ್ತು, ಕೋಶ ಓದು' ಎಂಬ ನಾಣ್ಣುಡಿಯಂತೆ ಪ್ರವಾಸ ಮಾಡುವುದರಿಂದ ಜ್ಞಾನಾರ್ಜನೆ ಹೆಚ್ಚಾಗುತ್ತದೆ. ವಿದ್ಯಾರ್ಥಿಗಳು ರಜಾ ದಿನಗಳು ಹಾಗೂ ಬಿಡುವಿನ ವೇಳೆಯಲ್ಲಿ ವಿವಿಧ ಐತಿಹಾಸಿಕ ಮತ್ತು ಪಾರಂಪರಿಕ ತಾಣಗಳಿಗೆ ಭೇಟಿ ನೀಡಿ ಅವುಗಳ ಮಹತ್ವ ತಿಳಿದುಕೊಳ್ಳಬೇಕು. ತಾವು ಕಲಿತ ಜ್ಞಾನ ಹಾಗೂ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ ಮಾತನಾಡಿ, ಪ್ರವಾಸಿ ತಾಣಗಳ ವೈಶಿಷ್ಟ್ಯತೆ ಹಾಗೂ ಪ್ರಾಮುಖ್ಯತೆಯನ್ನು ಅರಿತು ಅವುಗಳನ್ನು ಸ್ವಚ್ಛವಾಗಿ ಮತ್ತು ಜಾಗರೂಕತೆಯಿಂದ ಕಾಪಾಡಿಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದರು.

ಸ್ವಚ್ಛತೆ ಕಾಪಾಡುವುದು ಕೇವಲ ಪೌರಕಾರ್ಮಿಕರು ಅಥವಾ ಅಧಿಕಾರಿಗಳ ಜವಾಬ್ದಾರಿಯಲ್ಲ. ಪ್ರವಾಸಿಗರು ಹಾಗೂ ಸಾರ್ವಜನಿಕರೂ ಜವಾಬ್ದಾರಿ ವಹಿಸಬೇಕು. ಎಲ್ಲೇ ಹೋದರೂ ತ್ಯಾಜ್ಯವನ್ನು ನಿಗದಿತ ಕಸದ ಬುಟ್ಟಿಗಳಲ್ಲೇ ಹಾಕುವ ಮನೋಭಾವ ಬೆಳೆಸಿಕೊಳ್ಳಬೇಕು. ನಮ್ಮ ಮನಸ್ಥಿತಿ ಬದಲಾಗದ ಹೊರತು ದೊಡ್ಡ ಬದಲಾವಣೆ ಸಾಧ್ಯವಿಲ್ಲ. ನಾವು ಬದಲಾದರೆ ಮುಂದಿನ ಪೀಳಿಗೆ ನಮ್ಮನ್ನು ಅನುಸರಿಸುತ್ತದೆ ಎಂದು ಹೇಳಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ ವಿಭೂತಿ ಮಾತನಾಡಿ, ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಉದ್ದೇಶ ಪ್ರವಾಸೋದ್ಯಮದ ಮಹತ್ವವನ್ನು ಜನರಿಗೆ ತಿಳಿಸುವುದಾಗಿದೆ. ಪ್ರವಾಸವು ಮನಸ್ಸಿಗೆ ಉಲ್ಲಾಸ, ನೆಮ್ಮದಿ ಹಾಗೂ ಸಂತೋಷ ನೀಡುವುದರ ಜೊತೆಗೆ ಹೊಟೇಲ್, ಬೋಟಿಂಗ್, ರೆಸಾರ್ಟ್‌ಗಳು ಹಾಗೂ ಸ್ಥಳೀಯ ಉದ್ಯಮಗಳ ಬೆಳವಣಿಗೆಗೂ ಕಾರಣವಾಗುತ್ತದೆ ಎಂದರು.

> ವಿದ್ಯಾರ್ಥಿಗಳು ತಾವು ಎಲ್ಲೇ ತೆರಳಿದರೂ ಸ್ವಚ್ಛತೆ, ಆರೋಗ್ಯ ನೈರ್ಮಲ್ಯ ಹಾಗೂ ಉತ್ತಮ ನಡತೆಯನ್ನು ಕಾಯ್ದುಕೊಳ್ಳಬೇಕು. ನಿಮ್ಮ ಜಿಲ್ಲೆ, ರಾಜ್ಯ ಹಾಗೂ ಇಡೀ ದೇಶದ ಸಂಸ್ಕೃತಿ ಮತ್ತು ಪ್ರವಾಸೋದ್ಯಮದ ರಾಯಭಾರಿಗಳಂತೆ ಕಾರ್ಯನಿರ್ವಹಿಸಬೇಕು. ನಿಮ್ಮ ಉತ್ತಮ ನಡವಳಿಕೆ ಹಾಗೂ ಸ್ವಚ್ಛತೆಯಿಂದ ಪ್ರವಾಸಿಗರಲ್ಲಿ ಉತ್ತಮ ಅಭಿಪ್ರಾಯ ಮೂಡಿ, ಪ್ರವಾಸೋದ್ಯಮ ಮತ್ತಷ್ಟು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ.
>
> – ಮುಕುಲ್ ಜೈನ್, ಜಿ.ಪಂ. ಸಿಇಒ

ಉಪನ್ಯಾಸಕ ದತ್ತ ಪ್ರಸನ್ನ ಪಾಟೀಲ್ ಮಾತನಾಡಿ, ಡಿಜಿಟಲ್ ಕಾರ್ಯಸೂಚಿ ಹಾಗೂ ಕೃತಕ ಬುದ್ಧಿಮತ್ತೆ ಬಳಕೆಯ ಮೂಲಕ ಪ್ರವಾಸೋದ್ಯಮ ಕ್ಷೇತ್ರವನ್ನು ಆಧುನಿಕವಾಗಿ ಮರುಸೃಷ್ಟಿಸುವ ಅಗತ್ಯವಿದೆ. ಪ್ರಸ್ತುತ ಜಗತ್ತು ಡಿಜಿಟಲ್‌ಮಯವಾಗಿದ್ದು, ಜೆನ್-ಜಿ ಹಾಗೂ ಆಲ್ಫಾ ಪೀಳಿಗೆಯನ್ನು ತಲುಪಲು ಎಐ ತಂತ್ರಜ್ಞಾನ ಅಗತ್ಯವಾಗಿದೆ ಎಂದರು.

ಬೇಲೂರು, ಹಳೆಬೀಡು, ಬಾದಾಮಿ, ಪಟ್ಟದಕಲ್ಲು ಹಾಗೂ ಲಕ್ಕುಂಡಿಯಂತಹ ಧಾರ್ಮಿಕ ಮತ್ತು ಐತಿಹಾಸಿಕ ತಾಣಗಳ ಡಿಜಿಟಲ್ ವೀಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳುತ್ತಿರುವುದು ಶ್ಲಾಘನೀಯ ಎಂದರು. ಕಾರ್ಯಕ್ರಮವನ್ನು ಪ್ರೊ. ಬಾಹುಬಲಿ ಜೈನರ್ ನಿರೂಪಿಸಿ ವಂದಿಸಿದರು. ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಚಿತ್ರಕಲೆ ಹಾಗೂ ಪ್ರಬಂಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಸನ್ಮಾನಿಸಲಾಯಿತು. ಡಿ.ವೈ.ಎಸ್.ಪಿ ಮುರ್ತುಜಾ ಖಾದ್ರಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ನಗರಸಭೆ ಪೌರಕಾರ್ಮಿಕರು ಹಾಗೂ ಸಿಬ್ಬಂದಿ, ಪ್ರವಾಸಿಗರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

### ಡಿಜೆ ಅಬ್ಬರದ ನಡುವೆ ಸಂಸ್ಕೃತಿ ಉಳಿಸುವ ಕಾರ್ಯ ಶ್ಲಾಘನೀಯ: ಶಾಸಕ ಚಂದ್ರು ಲಮಾಣಿ

# ಸಂಪ್ರದಾಯಬದ್ಧ ಗಣೇಶ ವಿಸರ್ಜನೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಬಸ್ತಿಬಣದ ಮೇಲಿನ ಕಾಮನಕಟ್ಟಿಯ ಶ್ರೀ ಪಂಪ ಯುವಕ ಮಂಡಳದವರು ಪ್ರತಿಷ್ಠಾಪಿಸಿದ್ದ ಗಣೇಶನ ವಿಸರ್ಜನೆಯನ್ನು ಶನಿವಾರ ಸರಳವಾಗಿ ಹಾಗೂ ಸಂಪ್ರದಾಯಬದ್ಧವಾಗಿ ನೆರವೇರಿಸಿದರು.

ವಿಸರ್ಜನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಹಿಂದೂ ಹಬ್ಬಗಳು ನಮ್ಮ ಸಂಸ್ಕೃತಿಯ ಅವಿಭಾಜ್ಯ ಭಾಗವಾಗಿವೆ. ಇಂದಿನ ಡಿಜೆ ಸಂಸ್ಕೃತಿಯ ಅಬ್ಬರದ ನಡುವೆ ಪಂಪ ಯುವಕ ಮಂಡಳದವರು ಸಾಂಪ್ರದಾಯಿಕ ರೀತಿಯಲ್ಲಿ ಗಣೇಶ ವಿಸರ್ಜನೆಗೆ ಒತ್ತು ನೀಡಿರುವುದು ನಾಡಿನ ಕಲೆ ಹಾಗೂ ಸಂಸ್ಕೃತಿಯನ್ನು ಉಳಿಸುವ ಕಾರ್ಯವಾಗಿದೆ ಎಂದರು.

ಶಿರಹಟ್ಟಿ ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಹಾಗೂ ಓಣಿಯ ಹಿರಿಯರು ವಿಸರ್ಜನೆ ಮೆರವಣಿಗೆಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ಸಾಥ್ ನೀಡಿದರು. ಕುಂದಾಪುರದ ಶ್ರೀಹರಿ ತಂಡದ 12 ಮಂದಿ ಕಲಾವಿದರು ಚಂಡೆವಾದನದ ಮೂಲಕ ಜನಮನ ಸೆಳೆದರು. ಚಂಡೆಯ ತಾಳಕ್ಕೆ ಯುವಕರು ಹಾಗೂ ಸಾರ್ವಜನಿಕರು ಕುಣಿದು ಸಂಭ್ರಮಿಸಿದರು. ಮಂಗಳೂರಿನ ವಯಲಿನ್ ವಾದಕಿ ಶುಭಶ್ರೀ ಅವರು ಭಕ್ತಿಗೀತೆಗಳು, ಹೆಸರಾಂತ ಕನ್ನಡ ಗೀತೆಗಳು ಹಾಗೂ 'ಜೈ ಶ್ರೀರಾಮ್ ಬೋಲೇಗಾ' ಸೇರಿದಂತೆ ವಿವಿಧ ಗೀತೆಗಳನ್ನು ವಯಲಿನ್‌ನಲ್ಲಿ ನುಡಿಸಿ ಗಮನ ಸೆಳೆದರು.

> ಇಂದಿನ ಡಿಜೆ ಸಂಸ್ಕೃತಿಯ ಅಬ್ಬರದ ನಡುವೆ ಸಾಂಪ್ರದಾಯಿಕ ಗಣೇಶ ವಿಸರ್ಜನೆಗೆ ಒತ್ತು ನೀಡಿರುವುದು ನಾಡಿನ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸುವ ಶ್ಲಾಘನೀಯ ಕಾರ್ಯ.
>
> – ಡಾ. ಚಂದ್ರು ಲಮಾಣಿ, ಶಾಸಕ

ಈ ಸಂದರ್ಭದಲ್ಲಿ ವಿಜಯ ಕುಂಬಾರ, ಬಸಣ್ಣ ಹುಲಮನಿ, ಯಲ್ಲಪ್ಪ ಚಕ್ರಸಾಲಿ, ದೇವಪ್ಪ ಕುಂಬಾರ, ಬಾಬಣ್ಣ ಹಾಲಗುಂಡಿ, ಬಸಪ್ಪ ಕುಂಬಾರ, ಗಂಗಪ್ಪ ಕುಂಬಾರ, ಈಶ್ವರ ಉಡುಪಿ, ಸೋಮಪ್ಪ ಕುಂಬಾರ, ಪ್ರವೀಣ ಭೋಮಲೆ, ಮಲ್ಲಪ್ಪ ಮಂಟಗಣಿ, ಗಂಗಾಧರ ಮೆಣಸಿನಕಾಯಿ, ವೀರೇಶ ಸಾಸಲವಾಡ, ಪಂಪ ಯುವಕ ಮಂಡಳದ ಸದಸ್ಯರು, ಓಣಿಯ ಹಿರಿಯರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

---

### ಗುರುಕುಲ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ ವಿತರಣೆ

# ಸಮಾಜ ಸೇವೆಯ ಮನೋಭಾವ ಬೆಳೆಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕದ ವತಿಯಿಂದ ಶನಿವಾರ ಸಮೀಪದ ಹೂವಿನಶಿಗ್ಲಿ ಗ್ರಾಮದ ವಿರಕ್ತಮಠದ ಗುರುಕುಲ ಆಶ್ರಮದ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಮಾಜ ಕಳಕಳಿ, ಸೌಹಾರ್ದತೆ ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳುವುದು ಅತ್ಯವಶ್ಯಕವಾಗಿದೆ. ವಿದ್ಯಾರ್ಥಿಗಳು ತಮ್ಮನ್ನು ಸಮಾಜ ಸೇವೆಗೆ ಸಮರ್ಪಿಸಿಕೊಂಡಾಗ ಜೀವನದಲ್ಲಿ ಸಾರ್ಥಕತೆ ಹಾಗೂ ಅಭಿವೃದ್ಧಿ ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಮಾತನಾಡಿ, ಎನ್‌ಎಸ್‌ಎಸ್ ಘಟಕದ ವತಿಯಿಂದ ಪ್ರತಿವರ್ಷ ಗುರುಕುಲ ಆಶ್ರಮಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಬೆರೆತು ವಿವಿಧ ಸಮಾಜಮುಖಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆಡಳಿತಾಧಿಕಾರಿ ಚಿಕ್ಕಮಠದವರು ವಹಿಸಿದ್ದರು. ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಮಹೇಶ್ ಉಪ್ಪಿನ್, ಪ್ರೊ. ವಿಕ್ರಂ ಶಿರೋಳ, ಡಾ. ಆರ್.ಎಂ. ಪಾಟೀಲ, ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಕಿರಣ ಕೋತಿನ, ಪ್ರೊ. ಈರಣ್ಣ ಮಕರಬ್ಬಿ, ಸೋಮು ನವಲಗುಂದ, ಪ್ರೊ. ಸತೀಶ್‌ಕುಮಾರ್, ಪ್ರೊ. ಸಂಗಮೇಶ್ವರ ಉಳಿವೆಪ್ಪನವರ, ಹರೀಶ್, ಪ್ರೊ. ಶಿವಲೀಲಾ, ಪ್ರೊ. ಮೇಘನಾ, ಪ್ರೊ. ಮುಕುಂದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಶಿಕ್ಷಕರಾದ ಪಾಟೀಲ, ಇಟಗಿಮಠ ಹಾಗೂ ಬಡಿಗೇರ ಕಾರ್ಯಕ್ರಮ ನಿರ್ವಹಿಸಿದರು.

> ವಿದ್ಯಾರ್ಥಿಗಳಲ್ಲಿ ಸಮಾಜ ಕಳಕಳಿ, ಸೌಹಾರ್ದತೆ ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳುವುದು ಅತ್ಯವಶ್ಯಕ. ಸಮಾಜ ಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡಾಗ ಜೀವನದಲ್ಲಿ ಸಾರ್ಥಕತೆ ಹಾಗೂ ಅಭಿವೃದ್ಧಿ ಸಾಧಿಸಲು ಸಾಧ್ಯ.
>
> – ಶ್ರೀ ಚನ್ನವೀರ ಮಹಾಸ್ವಾಮಿಗಳು

---

### ನವರಾತ್ರಿಯಲ್ಲಿ 108 ದೇವಸ್ಥಾನಗಳ ದರ್ಶನ | ಐದನೇ ವರ್ಷದ ಉತ್ಸವಕ್ಕೆ ಅ.11ರಂದು ಚಾಲನೆ

# ರಾಜಕೀಯ, ಜಾತಿ, ಧರ್ಮದ ಸೀಮೆ ಮೀರಿದ ದುರ್ಗಾದೌಡ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜಕೀಯ, ಜಾತಿ ಹಾಗೂ ಧರ್ಮದ ಸೀಮೆಗಳನ್ನು ಮೀರಿ ಎಲ್ಲರನ್ನು ಒಗ್ಗೂಡಿಸುವ ಶ್ರೇಷ್ಠ ಕಾರ್ಯಕ್ರಮವೇ ದುರ್ಗಾದೌಡ. ಯಾವುದೇ ಸ್ವಾರ್ಥವಿಲ್ಲದೆ ಆರಂಭಿಸಿರುವ ಈ ಕಾರ್ಯಕ್ರಮ ವರ್ಷದಿಂದ ವರ್ಷಕ್ಕೆ ಜನರ ಸಹಕಾರದೊಂದಿಗೆ ವಿಜೃಂಭಣೆಯಿಂದ ನಡೆಯುತ್ತಿದ್ದು, ಮುಂದೆಯೂ ನಿರಂತರವಾಗಿ ಸಾಗಲಿದೆ ಎಂದು ದುರ್ಗಾದೌಡದ ರೂವಾರಿ ಗುರುನಾಥ ದಾನಪ್ಪನವರ ಹೇಳಿದರು. ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಸೋಮವಾರ ದಸರಾ ಉತ್ಸವ ಸಮಿತಿ ವತಿಯಿಂದ ಆಯೋಜಿಸಿದ್ದ 5ನೇ ವರ್ಷದ ದುರ್ಗಾದೌಡದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ನವರಾತ್ರಿ ಸಂದರ್ಭದಲ್ಲಿ ಯುವಜನರಲ್ಲಿ ಧಾರ್ಮಿಕ ಮೌಲ್ಯ, ಧರ್ಮಜಾಗೃತಿ ಹಾಗೂ ನಮ್ಮ ಸಂಪ್ರದಾಯ ಮತ್ತು ಪರಂಪರೆಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ದುರ್ಗಾದೌಡ ಆರಂಭಿಸಲಾಗಿದೆ. ಪ್ರತಿದಿನ ಬೆಳಗಿನ ಜಾವ ಭಕ್ತರು ಸ್ವಯಂಪ್ರೇರಿತರಾಗಿ ಪಾಲ್ಗೊಂಡು ವಿವಿಧ ದೇವಸ್ಥಾನಗಳಿಗೆ ತೆರಳಿ ದರ್ಶನ ಹಾಗೂ ಪೂಜೆ ಸಲ್ಲಿಸುವ ಮೂಲಕ ಧಾರ್ಮಿಕ ಆಚರಣೆಯೊಂದಿಗೆ ಸಾಮಾಜಿಕ ಒಗ್ಗಟ್ಟಿಗೂ ಮುನ್ನುಡಿ ಬರೆಯುತ್ತಿದ್ದಾರೆ ಎಂದರು.

ದುರ್ಗಾದೌಡ ಯಾವುದೇ ವ್ಯಕ್ತಿ ಅಥವಾ ಸಮುದಾಯಕ್ಕೆ ಸೀಮಿತವಾಗಬಾರದು. ವೈಯಕ್ತಿಕ ನಾಯಕತ್ವಕ್ಕಿಂತ ಎಲ್ಲರ ಸೇವೆ, ಸಹಕಾರ ಮತ್ತು ಪಾಲ್ಗೊಳ್ಳುವಿಕೆ ಮುಖ್ಯ. ನವರಾತ್ರಿ ಅವಧಿಯಲ್ಲಿ ಪಟ್ಟಣದ 108 ದೇವಸ್ಥಾನಗಳಿಗೆ ತೆರಳಿ ದರ್ಶನ ಪಡೆಯುವ ಮೂಲಕ ಧಾರ್ಮಿಕ ಜಾಗೃತಿ ಮೂಡಿಸಲಾಗುವುದು ಎಂದು ತಿಳಿಸಿದರು.

**ಅ.11ರಿಂದ ದುರ್ಗಾದೌಡಕ್ಕೆ ಚಾಲನೆ**

ದಸರಾ ಉತ್ಸವ ಸಮಿತಿ ವತಿಯಿಂದ ನಡೆಯುವ ಐದನೇ ವರ್ಷದ ದುರ್ಗಾದೌಡಕ್ಕೆ ಅ.11ರಂದು ಬೆಳಿಗ್ಗೆ 5 ಗಂಟೆಗೆ ಗ್ರಾಮದೇವತೆ ದೊಡ್ಡದ್ಯಾಮವ್ವನ ದೇವಸ್ಥಾನ ಆವರಣದಲ್ಲಿ ಚಾಲನೆ ದೊರೆಯಲಿದೆ. ಕರೇವಾಡಿಮಠದ ಮಳೆಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ತ್ರಿಶೂಲ ಹಾಗೂ ಭಗವಾನ್ ಧ್ವಜ ಪೂಜೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡುವರು.

ನವರಾತ್ರಿ ದಿನಗಳಲ್ಲಿ ಪ್ರತಿದಿನ ಬೆಳಿಗ್ಗೆ 5 ಗಂಟೆಗೆ ವಿವಿಧ ದೇವಸ್ಥಾನಗಳಿಂದ ದುರ್ಗಾದೌಡ ನಡೆಯಲಿದೆ. ಅ.18ರಂದು ಸಂಜೆ 5 ಗಂಟೆಗೆ ಸೋಮೇಶ್ವರ ದೇವಸ್ಥಾನದಲ್ಲಿ ಉಡಿ ತುಂಬುವ ಕಾರ್ಯಕ್ರಮ ಹಾಗೂ ಧರ್ಮಜಾಗೃತಿ ಸಭೆ ನಡೆಯಲಿದೆ. ಅ.19ರಂದು ಸಂಜೆ 5 ಗಂಟೆಗೆ ದುರ್ಗಾದೌಡದ ಭವ್ಯ ಶೋಭಾಯಾತ್ರೆ ನಡೆಯಲಿದ್ದು, ಗ್ರಾಮ ದೇವತೆ ದ್ಯಾಮವ್ವನ ದೇವಸ್ಥಾನಕ್ಕೆ ಆಗಮಿಸುವ ಮೂಲಕ ಕಾರ್ಯಕ್ರಮ ಸಂಪನ್ನಗೊಳ್ಳಲಿದೆ.

ದಸರಾ ಉತ್ಸವ ಸಮಿತಿ ಅಧ್ಯಕ್ಷ ರಾಘವೇಂದ್ರ ಪೂಜಾರ, ಸಂಚಾಲಕ ಬಸವರಾಜ ಅರಳಿ, ಮಹೇಶ ಹೊಗೆಸೊಪ್ಪಿನ, ಚಂಬಣ್ಣ ಬಾಳಿಕಾಯಿ, ಗುರುರಾಜ ಪಾಟೀಲ ಕುಲಕರ್ಣಿ, ಬಸವೇಶ ಮಹಾಂತಶೆಟ್ಟರ, ಶಂಕರ ಬಾಳಿಕಾಯಿ, ಶಿವಯೋಗಿ ಅಂಕಲಕೋಟಿ, ಈರಣ್ಣ ಕೋಲಕಾರ, ತಿಪ್ಪಣ್ಣ ಸಂಶಿ, ಪುಲಕೇಶಿ ಬಟ್ಟೂರ, ರಾಜಶೇಖರ ಶಿಗ್ಲಿಮಠ, ರವಿ ಲಿಂಗಶೆಟ್ಟಿ, ನಿಂಗಪ್ಪ ನೀಲಪ್ಪನವರ, ಮಲ್ಲನಗೌಡ ಪಾಟೀಲ, ಪ್ರಕಾಶ ಮೇವುಂಡಿ, ಮುತ್ತಣ್ಣ ಮುಳಗುಂದ, ಶಿವಾನಂದ ನಂದೆಣ್ಣವರ, ರಾಜಣ್ಣ ಗುಡಗೇರಿ, ಬಂಗಾರೆಪ್ಪ ಮುಳಗುಂದ ಸೇರಿದಂತೆ ಸಮಿತಿ ಪದಾಧಿಕಾರಿಗಳು ಹಾಗೂ ಭಕ್ತರು ಉಪಸ್ಥಿತರಿದ್ದರು.

ದುರ್ಗಾದೌಡದ ಆಮಂತ್ರಣ ಹಾಗೂ ಪ್ರಚಾರ ಪತ್ರಿಕೆಗಳನ್ನು ಇದೇ ಸಂದರ್ಭದಲ್ಲಿ ಬಿಡುಗಡೆಗೊಳಿಸಲಾಯಿತು.

---

### 2027ರ ರಜತ ಮಹೋತ್ಸವಕ್ಕೆ ಸಜ್ಜು: ಆರ್.ಬಿ. ದಾನಪ್ಪಗೌಡ್ರ

# ಔಷಧ ಭವನದ ಕನಸಿಗೆ ವೇಗ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದ ಬಹುವರ್ಷಗಳ ಕನಸಾಗಿರುವ ಸ್ವಂತ ಔಷಧ ಭವನ ನಿರ್ಮಾಣಕ್ಕೆ ಇದೀಗ ವೇಗ ನೀಡಲಾಗುವುದು ಎಂದು ಸಂಘದ ಅಧ್ಯಕ್ಷ ಆರ್.ಬಿ. ದಾನಪ್ಪಗೌಡ್ರ ಹೇಳಿದರು.

ನಗರದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ಭಾನುವಾರ ನಡೆದ ಸಂಘದ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂಘವು 24 ವರ್ಷಗಳ ಸಂಘಟನಾತ್ಮಕ ಪಯಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, 2027ರಲ್ಲಿ ರಜತ ಮಹೋತ್ಸವ ಆಚರಿಸುವ ಸಂಭ್ರಮದಲ್ಲಿದೆ.

ಈ ಹಿನ್ನೆಲೆಯಲ್ಲಿ ಸಂಘದ ಸ್ವಂತ ಕಟ್ಟಡ ನಿರ್ಮಾಣದ ಬಹುದಿನಗಳ ಕನಸನ್ನು ನನಸು ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಸ್ವಂತ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ನಿವೇಶನ ಗುರುತಿಸಲಾಗಿದ್ದು, ಕಟ್ಟಡಕ್ಕೆ ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣಕ್ಕೆ ಆದ್ಯತೆ ನೀಡಲಾಗುವುದು. ಸಂಘದ ಸದಸ್ಯರು ಹಾಗೂ ದಾನಿಗಳ ಸಹಕಾರದೊಂದಿಗೆ ಯೋಜನೆಯನ್ನು ಸಾಕಾರಗೊಳಿಸುವುದರ ಜೊತೆಗೆ ಶಾಸಕರು ಹಾಗೂ ಸಂಸದರ ಅನುದಾನ ಪಡೆಯುವ ಉದ್ದೇಶವಿದೆ ಎಂದು ತಿಳಿಸಿದರು.



2027ರ ರಜತ ಮಹೋತ್ಸವವನ್ನು ವೈವಿಧ್ಯಮಯ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಈಗಿನಿಂದಲೇ ರೂಪುರೇಷೆ ಸಿದ್ಧಪಡಿಸಲಾಗುವುದು. ಜಿಲ್ಲೆಯ ಎಲ್ಲ ತಾಲೂಕು ಘಟಕಗಳ ಪದಾಧಿಕಾರಿಗಳು, ಸದಸ್ಯರು ಹಾಗೂ ದಾನಿಗಳು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ವೇದಿಕೆಯ ಮೇಲೆ ಕರ್ನಾಟಕ ರಾಜ್ಯ ಔಷಧ ವ್ಯಾಪಾರಿಗಳ ಸಂಘದ ಜಿಲ್ಲಾ ಪ್ರತಿನಿಧಿ ಮಾಲತೇಶ ರಮಾಣಿ ಹಾಗೂ ರಾಜ್ಯ ಸಮಿತಿ ಸದಸ್ಯ ಎಂ.ಎ. ಲಿಂಗನಗೌಡ್ರ ಉಪಸ್ಥಿತರಿದ್ದರು.

ಸಭೆಯ ಆರಂಭದಲ್ಲಿ ಮೈತ್ರಾ ಕುಬಸದ ಪ್ರಾರ್ಥಿಸಿದರು. ಸಂಘದ ಕಾರ್ಯದರ್ಶಿ ಜ್ಞಾನೇಶ್ವರ ಖೋಕಲೆ ಸ್ವಾಗತಿಸಿ ವಾರ್ಷಿಕ ವರದಿ ಮಂಡಿಸಿದರು.

ಖಜಾಂಚಿ ಮಲ್ಲಪ್ಪ ಕಾಬಳ್ಳಿ ಲೆಕ್ಕಪತ್ರ ಮಂಡಿಸಿದರು. ರಮಜಾನಸಾಬ ನದಾಫ ನಿರೂಪಿಸಿದರು. ಸಹ ಕಾರ್ಯದರ್ಶಿ ರಮೇಶ ಕಿಲಾರಿ ವಂದಿಸಿದರು.

ಸುರೇಶ ನಿಡಗುಂದಿ, ನಾಗೇಶ ಹುಬ್ಬಳ್ಳಿ, ಭೀಮರೆಡ್ಡಿ ಪರಡ್ಡಿ, ಸಿ.ವ್ಹಿ. ಪಾಟೀಲ, ಸುರೇಶ ನವಲೆ, ಶಶಿಧರ ಮಲ್ಲನಗೌಡ್ರ, ಮಹಾಂತೇಶ ಸಾಲಿಮಠ, ದಿನೇಶ ಮೇಹರವಾಡೆ, ಗಣೇಶ ಕಬಾಡಿ, ಚನ್ನಬಸಪ್ಪ ರಡ್ಡೇರ, ಉಮೇಶ ಮೆಣಸಗಿ, ಶ್ರೀಕಾಂತ ಕೊಪ್ಪದ, ಚಂದ್ರಶೇಖರ ಪಾಟೀಲ, ಮಹೇಶ ಬಾಗಲಕೋಟಿ, ಎಂ.ಎಂ. ಕೋಡಬಳ್ಳಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಘಟಕಗಳ ಪದಾಧಿಕಾರಿಗಳು ಮತ್ತು ಸದಸ್ಯರು ಪಾಲ್ಗೊಂಡಿದ್ದರು.

> ಸಂಘದ ಬಹುವರ್ಷಗಳ ಕನಸಾಗಿರುವ ಸ್ವಂತ ಔಷಧ ಭವನ ನಿರ್ಮಾಣಕ್ಕೆ ವೇಗ ನೀಡಲಾಗುವುದು. ಸದಸ್ಯರು ಹಾಗೂ ದಾನಿಗಳ ಸಹಕಾರದೊಂದಿಗೆ ಈ ಯೋಜನೆಯನ್ನು ಸಾಕಾರಗೊಳಿಸಲು ಎಲ್ಲರೂ ಕೈಜೋಡಿಸಬೇಕು.
>
> – ಆರ್.ಬಿ. ದಾನಪ್ಪಗೌಡ್ರ, ಅಧ್ಯಕ್ಷರು, ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka